## ಫಾಸ್ಟ್ ನ್ಯೂಸ್

### ಪ್ರವೇಶಕ್ಕಾಗಿ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಆ□□ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ ಮತ್ತು ಪ.ವರ್ಗದ ಪಿ.ಯು.ಸಿ. ಐ.ಟಿ.ಐ. ಮತ್ತು ಡಿಪ್ಲೋಮೋ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು https://shp.karnataka.gov.in/bcwd ಆ□□ಲೈ□□ನಲ್ಲಿ ಜೂನ್ 20 ರೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ ಸೈಟ್ https://bcwd.karnataka.gov.in ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ, ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ದೂ.ಸಂ: 8050770004 ಮತ್ತು 8050770005.ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಲು ಇಲಾಖೆ ಅಧಿಕಾರಿ ತಿಳಿಸಿದ್ದಾರೆ.

### ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮೇ.16 ರಿಂದ ಅರ್ಜಿ ಸಲ್ಲಿಕೆ ಈಗಾಗಲೇ ಪ್ರಾರಂಭವಾಗಿದ್ದು, ಜೂನ್ 16 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಜೂನ್ 20ರಂದು ಹೊಸ ಅರ್ಜಿಗಳನ್ನು ತಾಲ್ಲೂಕು ಕಲ್ಯಾಣ ಅಧಿಕಾರಿಗಳು ಪರಿಶೀಲನೆ ನಡೆಸುವರು. ಜೂನ್ 23ರಂದು ತಾಲ್ಲೂಕು ಸಮಿತಿಯ ಮೂಲಕ ಆಯ್ಕೆಯಾದ ಹೊಸ ವಿದ್ಯಾರ್ಥಿಗಳ ಆಯ್ಕೆ ಪಟ್ಟಿ ಪ್ರಕಟಿಸಲಾಗುವುದು. ಆಯ್ಕೆಯಾದ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಪಡೆಯಲು ಜೂನ್ 30 ಕೊನೆಯ ದಿನವಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಚಿತ್ರದುರ್ಗ ತಾಲ್ಲೂಕು ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

### ತೋಟಗಾರಿಕೆ ತರಬೇತಿ: ಅರ್ಜಿ ಆಹ್ವಾನ

» ಚಿತ್ರದುರ್ಗ

2025-26ನೇ ಸಾಲಿಗೆ ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಹೋಬಳಿಯ ಐಯ್ಯನಹಳ್ಳಿ ಗ್ರಾಮದ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ರೈತರ ಮಕ್ಕಳು ಮಾತ್ರ ಅರ್ಜಿ ಸಲ್ಲಿಸಬಹುದು. ಖಾಲಿ ಇರುವ 15 ವಿದ್ಯಾರ್ಥಿಗಳ ಸೇರ್ಪಡೆ ಅವಕಾಶವಿದ್ದು, ಮೊದಲು ಬಂದವರಿಗೆ ಮೊದಲ ಆದ್ಯತೆ ಆಧಾರದಲ್ಲಿ ಭರ್ತಿ ಮಾಡಿಕೊಳ್ಳಲಾಗುವುದು. ಆಸಕ್ತರು ಹತ್ತಿರದ ತೋಟಗಾರಿಕೆ ಇಲಾಖೆ ಕಚೇರಿಯಲ್ಲಿ ಅರ್ಜಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ದೂರವಾಣಿ ಸಂಖ್ಯೆ 08194-230895, ಮೊಬೈಲ್ ಸಂಖ್ಯೆ 9980991048 ಕರೆ ಮಾಡುವಂತೆ ಪ್ರಕಟಣೆ ತಿಳಿಸಿದೆ.

### ವಸತಿ, ನಿವೇಶ ರಹಿತ ಫಲಾನುಭವಿಗಳ ಆಯ್ಕೆಗಾಗಿ ಗ್ರಾಮಸಭೆ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕಿನ ಕೆಎಂಇಆರ್‌ಸಿ ವತಿಯಿಂದ ಗಣಿಭಾದಿತ ಪ್ರದೇಶದಡಿ ಬರುವ ಗ್ರಾಮ ಪಂಚಾಯಿತಿಗಳಲ್ಲಿ ವಸತಿ, ನಿವೇಶನ ರಹಿತ ಫಲಾನುಭವಿಗಳ ಆಯ್ಕೆಗಾಗಿ ಇದೇ ಮೇ.27 ರಿಂದ 30 ರವರೆಗೆ ಗ್ರಾಮ ಸಭೆ ಆಯೋಜಿಸಲಾಗಿದೆ. ಮೊದಲನೇ ಆದ್ಯತೆಯಾಗಿ ಹೊಳಲ್ಕೆರೆ ತಾಲ್ಲೂಕಿನ 5 ಕಿ.ಮೀ ವ್ಯಾಪ್ತಿಗೆ ಬರುವ ಗಣಿಭಾದಿತ ಪ್ರದೇಶದ ಗ್ರಾಮ ಪಂಚಾಯಿತಿಗಳ ಹಳ್ಳಿಗಳ ಅರ್ಹ ವಸತಿ, ನಿವೇಶನ ರಹಿತರನ್ನು ಆಯ್ಕೆ ಮಾಡಿ ಪಟ್ಟಿಯನ್ನು ಸಲ್ಲಿಸಲು ಬಿ.ದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಣಿಗೇಹಳ್ಳಿಯಲ್ಲಿ ಮೇ.27ರಂದು ಗ್ರಾಮ ಸಭೆ ನಡೆಯಲಿದೆ. ಬಿ.ದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿರೇಕಂದವಾಡಿ ಹಾಗೂ ಹಿರೇಕಂದವಾಡಿ ಗೊಲ್ಲರಹಟ್ಟಿಯಲ್ಲಿ ಮೇ.28ರಂದು ಗ್ರಾಮ ಸಭೆ ನಡೆಯಲಿದೆ. ಚಿತ್ರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಸಾಪುರ ಗ್ರಾಮದಲ್ಲಿ ಮೇ.29ರಂದು ಗ್ರಾಮ ಸಭೆ ನಡೆಯಲಿದೆ. ಟಿ.ನುಲೇನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಿರುಮಲಾಪುರದಲ್ಲಿ ಮೇ.30ರಂದು ಗ್ರಾಮ ಸಭೆ ನಡೆಯಲಿದೆ. ಈ ಗ್ರಾಮ ಪಂಚಾಯಿತಿಗಳ ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ಅರ್ಹ ಫಲಾನುಭವಿಗಳು ನಿಗಧಿಪಡಿಸಿದ ಗ್ರಾಮಸಭೆಗಳ ದಿನಾಂಕದಂದು ಭಾಗವಹಿಸಿ, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

## ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಬೀಜ, ಗೊಬ್ಬರ ಕೊರತೆಯಾಗದಂತೆ ಕ್ರಮವಹಿಸಿ

» ಚಿತ್ರದುರ್ಗ

ಮುಂಗಾರು ಪೂರ್ವದಲ್ಲಿಯೇ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದೆ. ರೈತರು ಭೂಮಿಯನ್ನು ಹದ ಮಾಡಿಕೊಂಡು ಬಿತ್ತನೆಗೆ ಸಿದ್ಧತೆ ನಡೆಸಿದ್ದಾರೆ. ಕೃಷಿ ಅಧಿಕಾರಿಗಳು ಬಿತ್ತನೆ ಬೀಜ ಹಾಗೂ ಅಗತ್ಯ ರಸಗೊಬ್ಬರಗಳು ಕೊರತೆಯಾಗದಂತೆ ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ 2025-26ನೇ ಸಾಲಿನ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ, ಬಿತ್ತನೆ ಬೀಜ ಮತ್ತು ರಸಗೊಬ್ಬರ ಇತ್ಯಾದಿ ಕೃಷಿ ಪರಿಕರಗಳ ಯೋಜನೆ ಮತ್ತು ಲಭ್ಯತೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಿತ್ತನೆ ಬೀಜ ಹಾಗೂ ರಸಗೊಬ್ಬರಕ್ಕೆ ರೈತರು ಸಾಲುಗಟ್ಟಿ ನಿಲ್ಲುವಂತಾಗಬಾರದು. ಕಾಳ ಸಂತೆಯಲ್ಲಿ ಹೆಚ್ಚಿನ ದರಕ್ಕೆ ಮಾರಾಟವಾಗುವುದನ್ನು ಅಧಿಕಾರಿಗಳು ತಡೆಗಟ್ಟಬೇಕು. ಬೇಡಿಕೆಗೆ ಅನುಸಾರವಾಗಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಅಗತ್ಯ ದಾಸ್ತಾನು ಶೇಖರಿಸಿಡಬೇಕು. ಕೃಷಿ ಇಲಾಖೆಯ ಸಂಚಾರಿ ಮಣ್ಣು ಪರೀಕ್ಷಾ ಕೇಂದ್ರಗಳ ಸದುಪಯೋಗಪಡಿಸಿಕೊಂಡು ರೈತರ ಜಮೀನಿನ ಮಣ್ಣಿನ ಪರೀಕ್ಷೆ ನಡೆಸಬೇಕು.

ರೈತರಿಗೆ ಮಣ್ಣಿನ ಫಲವತ್ತತೆಯ ವರದಿಯನ್ನು ನೀಡಬೇಕು. ಇದನ್ನು ಆಧರಿಸಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಬಳಕೆ ಮಾಡಲು ರೈತರಿಗೆ ಅಧಿಕಾರಿಗಳು ಶಿಫಾರಸ್ಸು ಮಾಡಬೇಕು. ಇದರಿಂದ ಅನಾವಶ್ಯಕವಾಗಿ ಮಣ್ಣಿಗೆ ರಾಸಾಯನಿಕ ಗೊಬ್ಬರಗಳನ್ನು ಸುರಿಯುವುದು ತಪ್ಪುತ್ತದೆ. ಮಣ್ಣಿನ ಫಲವತ್ತತೆ ಆಧರಿಸಿ ಬೆಳೆ ಬೆಳೆಯುವುದರಿಂದ ರೈತರಿಗೆ ಆರ್ಥಿಕವಾಗಿ ಹೆಚ್ಚಿನ ನಷ್ಟ ಉಂಟಾಗುವುದಿಲ್ಲ. ರೈತರು ಸಾಲದ ಸುಳಿಯಲ್ಲಿ ಸಿಲುಕುವುದಿಲ್ಲ. ರೈತರು ಕೃಷಿಯೊಂದಿಗೆ ಪಶು ಸಂಗೋಪನೆ ಕೈಗೊಂಡು ಸಮಗ್ರ ಬೇಸಾಯ ಪದ್ಧತಿಯನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಬೇಕು. ಕೊಟ್ಟಿಗೆ ಹಾಗೂ ಸಾವಯವ ಗೊಬ್ಬರಗಳನ್ನು ಬಳಸುವುದರಿಂದ ಮಣ್ಣಿನ ಫಲವತ್ತತೆ ಹಾಳಾಗುವುದಿಲ್ಲ. ಈ ಕುರಿತು ರೈತರಿಗೆ ಮನದಟ್ಟು ಮಾಡಿಕೊಡಬೇಕು. ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಇತರೆ ಸಂಯುಕ್ತ ರಸ ಗೊಬ್ಬರಗಳನ್ನು ಬಳಸಲು ರೈತರಿಗೆ ಸಲಹೆ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ ಟಿ ಕುಮಾರಸ್ವಾಮಿ ಹೇಳಿದರು.

**12,924 ಕ್ವಿಂಟಾಲ್ ಬಿತ್ತನೆ ಬೀಜ ಸಂಗ್ರಹಣೆ:** ಜನವರಿಯಿಂದ ಮೇ ತಿಂಗಳವರೆಗೆ ಜಿಲ್ಲೆಯಲ್ಲಿ 79.9 ಮಿ.ಮೀ. ವಾಡಿಕೆ ಮಳೆ ನಿರೀಕ್ಷೆ ಇತ್ತು. ಆದರೆ ಜಿಲ್ಲೆಯಲ್ಲಿ ಈವರೆಗೆ 135.8 ಮಿ.ಮೀ.ಮಳೆಯಾಗಿದೆ.

ಇದರಿಂದಾಗಿ ಜಿಲ್ಲೆಯಲ್ಲಿ ಬಿತ್ತನೆ ಚಟುವಟಿಕೆಗಳು ಗರಿ ಗೆದರಿವೆ. ಶೇಂಗಾ, ಮೆಕ್ಕೆಜೋಳ, ರಾಗಿ, ತೊಗರಿ, ಸೂರ್ಯಕಾಂತಿ, ಹೆಸರು, ಹಲಸಂದಿ, ಸಿರಿಧಾನ್ಯ, ಹತ್ತಿ ಬೆಳೆಗಳನ್ನು ಹೆಚ್ಚಾಗಿ ಬೆಳೆಯುತ್ತಾರೆ.

ಕೃಷಿ ಇಲಾಖೆಯಿಂದ ಒಟ್ಟು 31454 ಕ್ವಿಂಟಾಲ್ ಬಿತ್ತನೆ ಬೀಜದ ಗುರಿ ನಿಗದಿ ಪಡಿಸಿಕೊಂಡಿದ್ದು, ಈಗಾಗಲೇ 12,924 ಕ್ವಿಂಟಾಲ್ ಬಿತ್ತನೆ ಬೀಜದ ದಾಸ್ತಾನು ಸಂಗ್ರಹಣೆ ಮಾಡಲಾಗಿದೆ. ಜುಲೈ 2ನೇ ವಾರದವರೆಗೂ ಬಿತ್ತನೆ ಮಾಡಲು ಅವಕಾಶವಿದೆ ಎಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ಸಭೆಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಏಪ್ರಿಲ್-25 ರಿಂದ ಮಾರ್ಚ್-26 ವರೆಗೆ ಒಟ್ಟು 94,546 ಮೆಟ್ರಿಕ್ ಟನ್ ರಸಗೊಬ್ಬರದ ಬೇಡಿಕೆ ನಿರೀಕ್ಷೆಯಿದೆ. ಇದುವರೆಗೂ ಒಟ್ಟು 32,045 ಮೆಟ್ರಿಕ್ ಟನ್ ಹೊಸ ಗೊಬ್ಬರ ದಾಸ್ತಾನು ಸಂಗ್ರಹಿಸಲಾಗಿದ್ದು, 12,567 ಮೆಟ್ರಿಕ್ ಟನ್ ಮಾರಾಟವಾಗಿದೆ. 19,477 ಮೆಟ್ರಿಕ್ ಟನ್ ಗೊಬ್ಬರ ಉಳಿಕೆಯಾಗಿದೆ. ಕೃಷಿ ಇಲಾಖೆಯ 22 ರೈತಸಂಪರ್ಕ ಕೇಂದ್ರ ಹಾಗೂ 13 ಹೆಚ್ಚುವರಿ ವಿತರಣಾ ಕೇಂದ್ರಗಳಲ್ಲಿ ಸಹಾಯ ಧನದಡಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು. ಇದನ್ನು ಹೊರತುಪಡಿಸಿ 59 ಕೃಷಿಪತ್ತಿನ ಸಹಕಾರ ಸಂಘಗಳು, 26 ರೈತ ಉತ್ಪಾದಕ ಸಂಸ್ಥೆಗಳು, 283 ಖಾಸಗಿ ಮಾರಾಟಗಾರರು ಬಿತ್ತನೆ ಬೀಜ ಮಾರಾಟ ಮಾಡಲಿದ್ದಾರೆ. ಕಳಪೆ ಹಾಗೂ ಹೆಚ್ಚಿನ ದರಕ್ಕೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟ ಮಾಡದಂತೆ ಈಗಾಗಲೇ ಸಂಬಂಧಪಟ್ಟವರಿಗೆ ಎಚ್ಚರಿಕೆ ನೀಡಲಾಗಿದೆ. ತೊಗರಿ, ಶೇಂಗಾ, ಸೂರ್ಯಕಾಂತಿ ಮುಸುಕಿನ ಜೋಳ, ರಾಗಿ ಮತ್ತು ಸಿರಿಧಾನ್ಯ ಬೆಳೆಗಳಲ್ಲಿ ಉತ್ತಮ ಇಳುವರಿ ಪಡೆಯಲು ಸುಧಾರಿತ ಬಿತ್ತನೆ ಬೀಜ ಹಾಗೂ ನವೀನ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳಲು ರೈತರಿಗೆ ಶಿಫಾರಸ್ಸು ಮಾಡಲಾಗುತ್ತಿದೆ. ರಾಷ್ಟ್ರೀಯ ಖಾದ್ಯ ತೈಲ ಅಭಿಯಾನದಡಿ ಎಣ್ಣೆಕಾಳುಗಳಾದ ಶೇಂಗಾ, ಸೂರ್ಯಕಾಂತಿ, ಹರಳೆ ಬಿತ್ತನೆ ಮಾಡಲು ಪ್ರೋತ್ಸಾಹ ನೀಡಲಾಗುತ್ತಿದೆ. ಯೂರಿಯಾ, ಡಿಎಪಿ, ಎಂಓಪಿ, ಕಾಂಪ್ಲೆಕ್ಸ್ ಹಾಗೂ ಎಸ್‌ಎಸ್‌ಪಿ ರಸಗೊಬ್ಬರಗಳ ಜೊತೆಗೆ ಲಘು ಪೋಷಕಾಂಶಗಳು, ಪೊಟಾಸಿಯಂ ಹಾಗೂ ಗಂಧಕ ಸಾರಗಳನ್ನು ಒದಗಿಸುವ ಹೊಸ ಗೊಬ್ಬರಗಳನ್ನು ಬಳಸಲು ರೈತರಿಗೆ ಸಲಹೆ ನೀಡಲಾಗುತ್ತಿದೆ ಎಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್ ತಿಳಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ರೈತರ ಸಲಹೆ ಕರ ಪತ್ರಗಳನ್ನು ಬಿಡುಗಡೆ ಮಾಡಿ, ರಸಗೊಬ್ಬರ ಮಾರಾಟ ಮಾಡುವ ಪಿಓಎಸ್ ಯಂತ್ರಗಳಿಗೆ ಚಾಲನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಗಾಯಿತ್ರಿ, ಕೃಷಿ ಉಪ ನಿರ್ದೇಶಕ ಕೆ.ಎಸ್.ಶಿವಕುಮಾರ್, ಕೃಷಿ ಇಲಾಖೆ ಜಾರಿ ದಳದ ಸಹಾಯಕ ನಿರ್ದೇಶಕರಾದ ಮಲ್ಲನಗೌಡ, ಜೆ,ಉಲ್ಪತ್ ಜೈಬ್, ಇಫ್ಕೋ ಕ್ಷೇತ್ರಾಧಿಕಾರಿ ಚಿದಂಬರಮೂರ್ತಿ, ಜಿಲ್ಲಾ ರಸಗೊಬ್ಬರ ಮಾರಾಟಗಾರರ ಯೂನಿಯನ್ ಅಧ್ಯಕ್ಷ ಜಿ.ಪಿ.ರೇವಣಸಿದ್ದಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಸರ್ಕಾರಿ ಪದವಿಪೂರ್ವ ಕಾಲೇಜು ಮುಂಬಡ್ತಿ ಪಡೆದ ಉಪನ್ಯಾಸಕರಿಗೆ ಸನ್ಮಾನ, ಬೀಳ್ಕೊಡಿಕೆ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿದ ಕೆ.ಎನ್. ವಸಂತಕುಮಾರ್‌ರವರಿಗೆ ಮುಂಬಡ್ತಿ ನೀಡಿ ತಳಕು ಎಸ್‌ಜಿಟಿ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾಗಿ ವರ್ಗಾವಣೆ ಮಾಡಲಾಗಿದೆ.



ಅರ್ಥಶಾಸ್ತ್ರ ಉಪನ್ಯಾಸಕರಾಗಿದ್ದ ಟಿ.ಲಲಿತಮ್ಮರಿಗೂ ಸಹ ಮುಂಬಡ್ತಿ ನೀಡಿ ಕೊಪ್ಪಳ ಜಿಲ್ಲೆಯ ಹನುಮನಾಳ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾಗಿ ವರ್ಗಾವಣೆ ಮಾಡಿದ್ದು ಮುಂಬಡ್ತಿ ಪಡೆದು ವರ್ಗಾವಣೆಯಾದ ಇಬ್ಬರನ್ನೂ ಕಾಲೇಜಿನ ಪ್ರಾಂಶುಪಾಲರು ಹಾಗೂ ಬೋಧಕ ವರ್ಗ ಸನ್ಮಾನಿಸಿ ಬೀಳ್ಕೊಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಕೆ.ತಿಮ್ಮಯ್ಯ, ವಸಂತಕುಮಾರ್ ಮತ್ತು ಲಲಿತಮ್ಮರವರು ಕಾಲೇಜಿನಲ್ಲಿ ತಮ್ಮ ಜವಾಬ್ದಾರಿಯನ್ನು ಪೂರ್ಣಪ್ರಮಾಣದಲ್ಲಿ ಪೂರೈಸಿದ್ದಾರೆ. ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ನೀಡಿದ್ದಾರೆ. ಕಾಲೇಜಿನ ಹಿರಿಯ ಉಪನ್ಯಾಸಕರಾಗಿ ಅನೇಕ ಸಮಸ್ಯೆಗಳಿಗೆ ಪರಿಹಾರವನ್ನು ನೀಡುವಲ್ಲಿ ಯಶಸ್ವಿಯಾಗಿದ್ದರು. ಇವರ ಸೇವೆಯನ್ನು ಕಾಲೇಜಿನ ಆಡಳಿತ ಮಂಡಳಿ ಸದಾಸ್ಮರಿಸುತ್ತದೆ ಎಂದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಕೆ.ಎನ್.ವಸಂತಕುಮಾರ್ ಸುಮಾರು ಎಂಟು ವರ್ಷಗಳಿಗೂ ಹೆಚ್ಚು ಕಾಲ ಕಾಲೇಜಿನಲ್ಲಿ ಸೇವೆ ಮಾಡಲು ಅವಕಾಶ ನನಗೆ ನೀಡಲಾಗಿದೆ. ಪ್ರತಿಹಂತದಲ್ಲೂ ಪ್ರಾಂಶುಪಾಲರು ಮತ್ತು ಸಿಬ್ಬಂದಿ ವರ್ಗ ನನಗೆ ಹೆಚ್ಚಿನ ಸಹಕಾರ ನೀಡಿದೆ ಎಂದರು. ಪ್ರಾಚಾರ್ಯೆ ಟಿ.ಲಲಿತಮ್ಮ ಮಾತನಾಡಿ, ಮುಂಬಡ್ತಿ ದೊರಕಿದ್ದು ಸಂತೋಷವಾದರೂ ಬಹಳವರ್ಷಗಳಿಂದ ಇಲ್ಲಿನ ಒಡನಾಟ ನನಗೆ ಹೆಚ್ಚು ಸ್ಪೂರ್ತಿ ನೀಡಿತ್ತು. ನಿಮ್ಮೆಲ್ಲರ ಶುಭಹಾರೈಕೆಯೊಂದಿಗೆ ಹೊಸ ಜವಾಬ್ದಾರಿ ನಿರ್ವಹಿಸುತ್ತೇನೆಂದರು.

ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರ್, ಹಬಿಬುಲ್ಲಾ, ಮುಜೀಬುಲ್ಲಾ, ಚಂದ್ರಶೇಖರ್, ನಾಗರಾಜುಬೆಳಗಟ್ಟ, ಪುಷ್ಪಲತಾ, ಹೀನಾಕೌಸರ್, ಶ್ರೀನಿವಾಸ್, ನರಸಿಂಹಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

## ಕೊರ್ಲಕುಂಟೆಯಲ್ಲಿ ಶಾಲಾ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆ



» ಪರಶುರಾಂಪುರ

ಚಳ್ಳಕೆರೆ ತಾಲೂಕಿನಲ್ಲಿ ಶೈಕ್ಷಣಿಕಅಭಿವೃದ್ಧಿಗೆ ಶಾಸಕ ಟಿ. ರಘುಮೂರ್ತಿ ಅವರಕೊಡುಗೆ ಅಪಾರವಾಗಿದೆಎಂದುಗ್ರಾಪಂ ಮಾಜಿ ಸದಸ್ಯಕೊರ್ಲಕುಂಟೆತಿಪ್ಪೇಸ್ವಾಮಿ ಹೇಳಿದರು. ಸಮೀಪದ ಕೆ ೂರ್ಲಕುಂಟೆಗ್ರಾಮದಲ್ಲಿಗುರುವಾರಜಿಲ್ಲಾಖನಿಜ ಪ್ರತಿಷ್ಠಾನ ಟ್ರಸ್ಟ್, ಡಿಎಂಎಫ್‌ಯೋಜನೆಯಡಿ ಸುಮಾರು ಮೂವತ್ತು ಲಕ್ಷ ವೆಚ್ಚದಎರಡು ಶಾಲಾ ಕೊಠಡಿಗಳ ನಿರ್ಮಾಣಕಾರ್ಯಕ್ಕೆ ನಡೆದ ಭೂಮಿ ಪೂಜಾಕಾರ್ಯದಲ್ಲಿ ಮಾತನಾಡಿದರು.

ತಾಲೂಕಿನಗಡಿಭಾಗದ ಗ್ರಾಮಗಳ ಶಾಲಾ ವ್ಯವಸ್ಥೆಗೆ ಹೆಚ್ಚಿನ ಅವಕಾಶ ನೀಡಲಾಗುತ್ತಿದೆ.ಸುಮಾರು88ವಿದ್ಯಾರ್ಥಿಗಳುಕಲಿಯುತ್ತಿರುವಗ್ರಾಮದಲ್ಲಿ ಶಾಲಾ ಕೊಠಡಿಗಳ ಕೊರತೆಇತ್ತು.ತುರ್ತಾಗಿಕ್ರಮ ವಹಿಸಿರುವ ಶಾಸಕರು, ಎರಡು ಕೊಠಡಿಗಳ ನಿರ್ಮಾಣಕ್ಕೆ ಅನುಕೂಲ ಮಾಡಲಾಗಿದೆ. ಜೊತೆಗೆ, ಕಾಮಗಾರಿ ನಿರ್ವಹಿಸುವ ಕೆಆರ್‌ಡಿಎಲ್ ನಿಗಮಕ್ಕೆ ಮೂರು ತಿಂಗಳೊಳಗೆ ಗುಣಮಟ್ಟವಾಗಿ ನಿರ್ಮಿಸಲು ಸೂಚಿಸಿದ್ದಾರೆ. ಅದರಂತೆ ಶೈಕ್ಷಣಿಕ ವರ್ಷದ ಶಾಲಾ ಚಟುವಟಿಕೆಗಳಿಗೆ ಅನುಕೂಲ ಆಗುವ ರೀತಿ ಸುಸಜ್ಜಿತವಾಗಿಕಾಮಗಾರಿ ನಡೆಯಬೇಕಿದೆ.ಈ ಭಾಗದ ಹತ್ತಾರು ಹಳ್ಳಿಗಳ ಮಕ್ಕಳ ಶಿಕ್ಷಣ ವ್ಯವಸ್ಥೆಗಾಗಿ, ಈಗಾಗಲೇ ಶಾಸಕರಿಗೆ ಮನವಿ ಸಲ್ಲಿಸಿರುವಂತೆ ಕೊರ್ಲಕುಂಟೆಗ್ರಾಮದಲ್ಲಿ ಪಿಯುಕಾಲೇಜು ಮತ್ತು ವಿದ್ಯಾರ್ಥಿ ನಿಲಯ ಸ್ಥಾಪನೆ ಆಗಬೇಕಿದೆಎಂದರು.

ಗ್ರಾಮದಕೆ.ಆರ್.ಮಂಜುನಾಥ್ ಮಾತನಾಡಿ, ಮಕ್ಕಳ ಸಂಖ್ಯೆಗೆಅನುಗುಣವಾಗಿ ಶಿಕ್ಷಕರ ನಿಯೋಜನೆ ಆಗಬೇಕು.ಶಾಲಾ ಆರಂಭದಲ್ಲೇ ಇಲಾಖೆ ಅಧಿಕಾರಿಗಳು ಕ್ರಮ ವಹಿಸಬೇಕು.ಗ್ರಾಮದ ಸರ್ಕಾರಿ ಶಾಲೆಗೆ ಮಕ್ಕಳನ್ನು ದಾಖಲು ಮಾಡುವಂತೆ ಶಿಕ್ಷಕರೊಂದಿಗೆ, ಪಾಲಕರ ಮನೆಗಳಿಗೆ ಭೇಟಿ ನೀಡುತ್ತಿದ್ದೇವೆಎಂದರು.ಭೂದಾನಕುಟುಂಬಸ್ಥರಾದ ಶಾರದಮ್ಮಅಶೋಕ್, ಸಂತೋಷ್, ನಂದೀಶ್,

ಗ್ರಾಪಂ ಮಾಜಿ ಸದಸ್ಯರಾದ ಪಿ.ಕೆಂಗಪ್ಪ, ಡಿ. ಸಿರಿಯಣ್ಣ,ಶಾಲಾ ಸಮಿತಿಅಧ್ಯಕ್ಷ ಶಿವಾನಂದ,ಎಂ. ಮಾರಣ್ಣ ಕೆ.ಅನಂತ, ಮಹಾಲಿಂಗಪ್ಪ, ಜೆ.ಎಚ್.ಮಂಜುನಾಥ, ಶಿವಶಂಕರ್, ರಾಮದಾಸ್, ಬಸವರಾಜ್, ಡಿ. ಮಂಜಣ್ಣ, ಕೆ.ಎಚ್.ಆನಂದ್ ಮತ್ತಿತರರಿದ್ದರು.

## 24ರಂದು ಜಗಜ್ಯೋತಿ ಬಸವೇಶ್ವರ ಜಯಂತೋತ್ಸವ, ವಿದ್ಯಾರ್ಥಿಗಆಗೆ ಪುರಸ್ಕಾರ

» ಹೊಳಲ್ಕೆರೆ

ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ತಾಲೂಕು ವೀರಶೈವ ಲಿಂಗಾಯಿತ ಸಮಾಜ, ಮತ್ತು ತಾಲೂಕು ವೀರಶೈವ ಲಿಂಗಾಯತ ನೌಕರರ ಸಂಘದ ಸಹಯೋಗದಲ್ಲಿ ಜಗಜ್ಯೋತಿ ಬಸವೇಶ್ವರ ಜಯಂತೋತ್ಸವ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ಕಾರ್ಯಕ್ರಮವನ್ನು ಮೇ 24ರ ಶನಿವಾರ ಪಟ್ಟಣದ ಸಂವಿಧಾನದಲ್ಲಿ ಹಮ್ಮಿಕೊಳ್ಳಲಾಗಿದೆ.ಅಖಿಲ ಭಾರತ ವೀರಶೈವ ಮಹಾಸಭಾ ರಾಜ್ಯಾಧ್ಯಕ್ಷ ಶಂಕರ್ ಬಿದರಿ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಲಿದ್ದಾರೆ.ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರಾ ಡಾ.ಶಾಮನೂರು ಶಿವಶಂಕರಪ್ಪ,ರಾಷ್ಟ್ರೀಯ ಉಪಾಧ್ಯಕ್ಷರಾದ ಅಣಬೇರು ರಾಜಣ್ಣ, ರಾಷ್ಟ್ರೀಯ ಕಾರ್ಯದರ್ಶಿ ರೇಣುಕಾ ಪ್ರಸಾದ್ ಬಸವೇಶ್ವರರ ಭಾವಚಿತ್ರ ಮೆರವಣಿಗೆ ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಅಧ್ಯಕ್ಷ ಪ್ರಭಾಕರಮಾಳಿಗೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಚಿತ್ರದುರ್ಗ ಲೋಕಸಭಾ ಸದಸ್ಯರಾದ ಶರಣ ಶ್ರೀ ಗೋವಿಂದ ಕಾರಜೋಳ, ಶಾಸಕ ಡಾ. ಎಂ.ಚಂದ್ರಪ್ಪ ಎಂಎಲ್ ಸಿ ಕೆ.ಎಸ್. ನವೀನ್, ಮಾಜಿ ಸಚಿ ಹೆಚ್.ಆಂಜನೇಯ ಮಾಜಿ ಶಾಸಕರಾದ ಜಿ.ಸಿ.ಮಂಜುನಾಥ್, ಎಂ.ಬಿ. ತಿಪ್ಪೇರುದ್ರಪ್ಪ,ಯು.ಹೆಚ್.ತಿಮ್ಮಣ್ಣ, ಪಿ.ರಮೇಶ್ ಪುರಸಭೆ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್ ಹೆಚ್.ಆರ್. ನಾಗರತ್ನ ವೇದಮೂರ್ತಿ, ಮಹಿಳಾ ಘಟಕದ ರಾಷ್ಟ್ರೀಯ ಅಧ್ಯಕ್ಷರಾದ ವೀಣಾ ಕಾಶಪ್ಪನವರ್, ರಾಜ್ಯ ಉಪಾಧ್ಯಕ್ಷ ಶ್ರೀನಿವಾಸ ರೆಡ್ಡಿ,ಟಿ.ಎ.ಪಿ.ಎಂ.ಎಸ್, ಅಧ್ಯಕ್ಷ ಎಸ್.ಆರ್ .ಗಿರೀಶ್ , ಹನುಮಲಿ ಹೆಚ್.ಎ ಷಣ್ಮುಖಪ್ಪ ಉಪಸ್ಥಿತರಿರುವರು.

## ಪ್ರಮುಖ ಸುದ್ದಿ

### ಎಸ್‌ಆರ್‌ಎಸ್ ಹೆರಿಟೇಜ್ ಶಾಲೆಯಲ್ಲಿ ಆಪರೇಷನ್ ಸಿಂಧೂರ ಯಶಸ್ವಿ ಹಿನ್ನೆಲೆ

# ವಿಮಾನ ಮಾದರಿ ಪರಿಕರಕಗಳ ಸಿದ್ದಪಡಿಸಿ ಉಡಾವಣೆ

» ಚಳ್ಳಕೆರೆ

ನಗರದ ಬೆಂಗಳೂರು ರಸ್ತೆಯ ಎಸ್‌ಆರ್‌ಎಸ್ ಹೆರಿಟೇಜ್ ಶಾಲೆಯಲ್ಲಿ ಪ್ರಸ್ತುತ 2025-26ನೇ ಸಾಲಿನ ಶೈಕ್ಷಣಿಕ ವರ್ಷವನ್ನು ಉಡಾವಣೆ ಹಾಗೂ ವಿಮಾನಮಾದರಿ ಪರಿಕರಗಳನ್ನು ಚಾಲನೆ ಮಾಡುವ ಮೂಲಕ ಶೈಕ್ಷಣಿಕ ವರ್ಗಕ್ಕೆ ಚಾಲನೆ ನೀಡಲಾಯಿತು. ಕಳೆದ ಏ.22ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ 26 ಯಾತ್ರಾತ್ರಿಗಳನ್ನು ಉಗ್ರಗಾಮಿಗಳು ದಾರುಣವಾಗಿ



ಹತ್ಯೆಗೈದಿದ್ದು, ಉಗ್ರಗಾಮಿಗಳ ಮೇಲೆ ದೇಶದ ಸೈನಿಕರು ಆಪರೇಷನ್ ಸಿಂಧೂರ ಮೂಲಕ ಅವರನ್ನು ಸದೆಬಡಿದು ದೇಶವನ್ನು ರಕ್ಷಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಉಡಾವಣೆ ಮತ್ತು ವಿಮಾನ ಮಾದರಿ ಪರಿಕರಗಳು ಸಿದ್ದಗೊಂಡಿದ್ದವು.

ಉದಯೋನ್ಮುಖ ಪತ್ರಕರ್ತ ಕೊರ್ಲಕುಂಟೆತಿಪ್ಪೇಸ್ವಾಮಿ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಇಂದಿನ ಸ್ಥಿತಿಯಲ್ಲಿ ತಾಂತ್ರಿಕ ಮತ್ತು ತಂತ್ರಜ್ಞಾನದ ಬಗ್ಗೆ ಹೆಚ್ಚು ಆಸಕ್ತಿ ಮೂಡುತ್ತಿರುವುದು ಸಂತಸ ವಿಷಯ. ವೈಜ್ಞಾನಿಕ ಜಗತ್ತಿನಲ್ಲಿ ಆಗುತ್ತಿರುವ ಬದಲಾವಣೆಗೆ ವಿದ್ಯಾರ್ಥಿಗಳು ಸಹ ಇಂತಹ ಕಾರ್ಯಕ್ರಮದ ಮೂಲಕ ಸಹಕಾರ ನೀಡುತ್ತಿದ್ದಾರೆ. ಇಂತಹ ಪರಿಕಲ್ಪನೆಗೆ ಶಿಕ್ಷಕ ವರ್ಗದ ಮಾ

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಬಿ.ಎಸ್.ವಿಜಯ್ ವಹಿಸಿದ್ದರು. ಶಿಕ್ಷಕರಾದ ವಾಣಿ, ಸಹನಾ, ಅರುಣ್, ಅಶೋಕ್‌ಮೋಹಿತೆ, ಸುಷ್ಮಾ, ನಯಾಜ್, ಶಿಲ್ಪ, ಗೋಪಾಲ್ ಮುಂತಾದವರು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಪಿ.ಸಿ. & ಪಿ.ಎನ್.ಡಿ.ಟಿ ಸಭೆ

» ದಾವಣಗೆರೆ

ಜಿಲ್ಲಾ ಸಲಹಾ ಸಮಿತಿ ಸಭೆಯನ್ನು ಮೇ.28 ರಂದು ಸಂಜೆ 4.30ಕ್ಕೆ ನಗರದ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಪಿ.ಸಿ & ಪಿ.ಎನ್.ಡಿ.ಟಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ತಿಳಿಸಿದ್ದಾರೆ.

## ಅನಾರೋಗ್ಯಕ್ಕೆ ತುತ್ತಾದ ಗೃಹಿಣಿ ಇಂದಿರಮ್ಮ ಆತ್ಮಹತ್ಯೆಗೆ ಶರಣು.

» ಚಳ್ಳಕೆರೆ

ತಾಲ್ಲೂಕಿನ ಗೊರ್ಲತ್ತು ಗ್ರಾಮದಲ್ಲಿ ಅನಾರೋಗ್ಯಕ್ಕೆ ತುತ್ತಾಗಿದ್ದ ಇಂದಿರಮ್ಮ(45) ಎಂಬ ಮಹಿಳೆ ವೈದ್ಯರಲ್ಲಿ ಪರೀಕ್ಷಿಸಿದರೂ ಗುಣಮುಖರಾಗದ ಹಿನ್ನಲೆಯಲ್ಲಿ ಭಯಗೊಂಡು ತನ್ನ ವಾಸದ ಮನೆಯಲ್ಲಿ ವೇಲಿನಿಂದ ನೇಣುಹಾಕಿಕೊಂಡು ಮೃತಪಟ್ಟಿರುತ್ತಾಳೆ. ಮೃತಳ ಪುತ್ರಿ ಕಾದಂಬರಿ ಪೊಲೀಸರಿಗೆ ದೂರು ನೀಡಿ ನನ್ನ ತಾಯಿ ಕಳೆದ ಕೆಲವು ತಿಂಗಳಿನಿಂದ ಅನಾರೋಗ್ಯಕ್ಕೆ ತುತ್ತಾಗಿ ಬೇಸರಗೊಂಡಿದ್ದಳು. ನಾವು ಹಲವಾರು ಬಾರಿ ಧೈರ್ಯ ಹೇಳಿದ್ದರೂ ಕೇಳದೆ ನೇಣುಹಾಕಿಕೊಂಡು ಮೃತಪಟ್ಟಿರುತ್ತಾಳೆ ಎಂದ ತಿಳಿಸಿದ್ದು, ಎಎಸ್ಐ ನಾಗೇಂದ್ರಪ್ಪ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

## ಬೋಸಯ್ಯ ನಿಧನ


» ಚಿತ್ರದುರ್ಗ



ಹೊಳಲ್ಕೆರೆ ತಾಲ್ಲೂಕು ಮಾಳೆನಹಳ್ಳಿ ಕಾವಲ್ ಚುಂಕ್ಕವ್ವನ ಹಳ್ಳಿಯ ಬೋಸಯ್ಯ(91) ಗುರುವಾರ ಬೆಳಿಗ್ಗೆ 9 ಕ್ಕೆ ತಮ್ಮ ನಿವಾಸದಲ್ಲಿ ನಿಧನರಾದರು. ಮೃತರು ಒಬ್ಬ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಶುಕ್ರವಾರ ಬೆಳಿಗ್ಗೆ 9 ಗಂಟೆಗೆ ಚುಕ್ಕವ್ವನಹಳ್ಳಿ ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

## ಜನೌಷಧಿ ಕೇಂದ್ರ ಸ್ಥಗಿತ ಆದೇಶ ರದ್ದು ಪಡಿಸಲು ಸಿಎಂಗೆ ಸಂಸದ ಬೊಮ್ಮಾಯಿ ಆಗ್ರಹ

» ಹಾವೇರಿ



ಹಾವೇರಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಪ್ರಾರಂಭಿಸಲಾದ ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸುವಂತೆ ರಾಜ್ಯ ಸರ್ಕಾರ ಹೊರಡಿಸಿದ ಆದೇಶ ರದ್ದುಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಈ ಕುರಿತು ಪತ್ರ ಬರೆದಿರುವ ಅವರು, ಹಾವೇರಿ ಜಿಲ್ಲಾ ಪ್ರಧಾನ ಮಂತ್ರಿ ಜನೌಷಧಿ ಕೇಂದ್ರದ ಮಾಲೀಕರ ಸಂಘದವರು, ಹಾವೇರಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಪ್ರಾರಂಭಿಸಲಾದ ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸುವಂತೆ ರಾಜ್ಯ ಸರ್ಕಾರ ಹೊರಡಿಸಿದ ಆದೇಶ ರದ್ದುಗೊಳಿಸುವಂತೆ ಮನವಿ ಮಾಡಿಕೊಂಡಿರುತ್ತಾರೆ. ಪ್ರಧಾನ ಮಂತ್ರಿ ಜನೌಷಧಿ ಕೇಂದ್ರಗಳನ್ನು ಸರ್ಕಾರಿ ಆಸ್ಪತ್ರೆಗಳ ಆವರಣಗಳಲ್ಲಿ ಸ್ಥಗಿತಗೊಳಿಸುವುದರಿಂದ ಸಾಮಾನ್ಯ ಬಡ ಜನರಿಗೆ ಉತ್ತಮ ಗುಣಮಟ್ಟದ ಜನರಿಕ್ ಔಷಧಿಗಳನ್ನು ಕಡಿಮೆ ಹಾಗೂ ಕೈಗೆಟುಕುವ ದರಗಳಲ್ಲಿ ದೊರಕಿಸುವ ಕೇಂದ್ರ ಸರ್ಕಾರದ ಉದ್ದೇಶಕ್ಕೆ ಅಡ್ಡಿಪಡಿಸಿದಂತಾಗುತ್ತದೆ. ಆದುದ್ದರಿಂದ, ಸದರಿ ವಿಷಯದ ಬಗ್ಗೆ ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಕೂಡಲೇ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಬೇಕೆಂದು ಕೋರಿದ್ದಾರೆ.

## ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ವಿರೋಧಿ ಸಂಸ್ಥೆಗೆ ಕೃಷ್ಣ ನೇಮಕ

» ಹರಿಹರ

ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ವಿರೋಧಿ ಸಂಸ್ಥೆಗೆ ಹರಿಹರ ತಾಲೂಕು ನೂತನ ಅಧ್ಯಕ್ಷರನ್ನಾಗಿ ಎಂ.ಕೃಷ್ಣ ನೇಮಕ ಮಾಡಲಾಗಿದೆ ಎಂದು ರಾಷ್ಟ್ರೀಯ ಅಧ್ಯಕ್ಷ ಮೋಹನ್ ರಾವ್ ನೆಲವಡೆ ಆದೇಶ ನೀಡಿರುವದಾಗಿ ಹರಿಹರ ತಾಲೂಕು ನೂತನ ಅಧ್ಯಕ್ಷ ಎಂ.ಕೃಷ್ಣ ತಿಳಿಸಿದರು. ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ವಿರೋಧಿ ಸಂಸ್ಥೆಗೆ ಹರಿಹರ ತಾಲೂಕು ನೂತನ ಅಧ್ಯಕ್ಷರಾಗಿ ನೇಮಕಗೊಂಡ ಎಂ.ಕೃಷ್ಣ ಸುದ್ದಿಗಾರರೊಂದಿಗೆ ಮಾತನಾಡಿ, ನನ್ನನ್ನು ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ಅಧ್ಯಕ್ಷರನ್ನಾಗಿ ನಾಮನಿರ್ದೇಶನ ಮಾಡಿರುತ್ತಾರೆ ಹಾಗೂ ಈ ಮೂಲಕ ತಾಲೂಕಿನ ಜನರ ಸಂಪರ್ಕ ದಲ್ಲಿದ್ದು ಜನರಿಗೆ ಸಕಾಲದಲ್ಲಿ ಸ್ಪಂದಿಸುವ ಜನರನ್ನು ಒಳಗೊಂಡ ಸಮಿತಿ ರಚಿಸುವಂತೆ ಕರೆ ನೀಡಿರುವುದಾಗಿ ತಿಳಿಸಿದರು.

ಕಾನೂನು ಅರಿವು ಕಾರ್ಯಕ್ರಮಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ ಮ.ಕರೆಣ್ಣವರ ಹೇಳಿಕೆ

# ಮಾದಕ ವ್ಯಸನಿಗಳು ಸಮಾಜಘಾತುಕ ವ್ಯಕ್ತಿಗಳು

» ದಾವಣಗೆರೆ



ಇತ್ತೀಚಿನ ದಿನಗಳಲ್ಲಿ ಹದಿಹರೆಯದ ಯುವಕ □ ಯುವತಿಯರೇ ಹೆಚ್ಚಿನ ಸಂಖ್ಯೆಯಲ್ಲಿ ಗಾಂಜಾ, ಹಫೀಮು, ಬೌನ್‌ಶುಗರ್, ಕೋಕೆನ್, ನಿಕೋಟಿನ್‌ನಂತಹ ಮಾದಕ ವಸ್ತುಗಳಿಗೆ ದಾಸರಾಗುತ್ತಿದ್ದಾರೆ. ಇವರೆಲ್ಲಾ ಸಮಾಜಘಾತುಕ ವ್ಯಕ್ತಿಗಳು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ನೆರಳು ಬೀಡಿ ಕಾರ್ಮಿಕರ ಯೂನಿಯನ್ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ನಗರದ ಭಾಷಾ ನಗರದಲ್ಲಿನ ನಗರ ಆರೋಗ್ಯ ಕೇಂದ್ರ (ಪ್ರಸೂತಿ ಆರೋಗ್ಯ ಕೇಂದ್ರ) ದಲ್ಲಿ ಆಯೋಜಿಸಲಾಗಿದ್ದ "ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ 2005 ಮತ್ತು ಮಾದಕ ವಸ್ತುಗಳ ನಿಯಂತ್ರಣ ಕಾಯ್ದೆ" ಕುರಿತು ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಾರ್ವಜನಿಕವಾಗಿ ಮಾದಕ ವಸ್ತುಗಳ ಸೇವನೆ, ಮಾರಾಟ, ಸಾಗಾಣೆ ಇಂತಹ ಪ್ರಕರಣಗಳು ಕಂಡುಬಂದಲ್ಲಿ ಆಲಸ್ಯ ಮಾಡದೇ ಸಂಬಂಪಟ್ಟ ಇಲಾಖೆಗೆ ಮಾಹಿತಿ ನೀಡಬೇಕು. ಮಾದಕ ವ್ಯಸನಗಳಿಗೆ ದಾಸರಾಗುವುದರಿಂದ ದೈಹಿಕ ಮತ್ತು ಮಾನಸಿಕವಾಗಿ ಗಾಢವಾದ ಪರಿಣಾಮ ಬೀರುತ್ತದೆ. ಅಲ್ಲದೇ ಪುರುಷತ್ವ ಮತ್ತು ಲೈಂಗಿಕತೆಯನ್ನು ಕುಂದಿಸುತ್ತದೆ. ಮಾದಕ ವ್ಯಸನಗಳಿಂದ ವಿವಿ ರೀತಿಯ ಕೃತ್ಯಗಳ್ಲಲಿ ಭಾಗಿಯಾಗಿ ಶಿಕ್ಷೆಗೆ ಗುರಿಯಾಗುವುದಲ್ಲದೇ ಕುಟುಂಬಗಳು ಬೀದಿಗೆ ಬರುತ್ತವೆ. ಆದ್ದರಿಂದ ವ್ಯಸನಮುಕ್ತರಾಗಿ ಸಮಾಜದಲ್ಲಿ ಮೌಲ್ಯಯುತವಾದ ಜೀವನ ಕಟ್ಟಿಕೊಳ್ಳಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಉನ್ನತ ಮಟ್ಟದ ವ್ಯಕತಿಗಳಾಗಿ ಬಾಳಬೇಕು. ಈ ನಿಟ್ಟಿನಲ್ಲಿ ತಮ್ಮಗಳ ಸಹಕಾರ ಅತ್ಯಗತ್ಯ ಎಂದರು.

ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ 2005 ರಲ್ಲಿ ಜಾರಿ ಮಾಡಿದ್ದು, ಕೇವಲ ದೈಹಿಕ ಹಿಂಸೆಗೆ ಸೀಮಿತಗೊಳಿಸದೆ, ಲೈಂಗಿಕ,

ಮೌಖಿಕ, ಭಾವನಾತ್ಮಕ, ಆರ್ಥಿಕ, ಮತ್ತು ಮಾನಸಿಕ ಹಿಂಸೆಯನ್ನು ಸಹ ಒಳಗೊಂಡಿದೆ. ವರದಕ್ಷಿಣೆಗಾಗಿ ಕಿರುಕುಳ ನೀಡುವುದು, ಮನೆಯಿಂದ ಹೊರಹಾಕುವುದು ಇವೆಲ್ಲವೂ ದೌರ್ಜನ್ಯ ತಡೆ ಕಾಯ್ದೆ ವ್ಯಾಪ್ತಿಗೆ ಬರುತ್ತವೆ. ಕಾಯ್ದೆಯ ಮೂಲಕ ಮಹಿಳೆಯರಿಗೆ ಆರ್ಥಿಕ, ಸಾಮಾಜಿಕ, ಭದ್ರತೆಯನ್ನು ಒದಗಿಸಲಾಗುತ್ತದೆ. ಮಹಿಳೆಯರಿಗೆ ಕೌಟುಂಬಿಕ ದೌರ್ಜನ್ಯಗಳಂತಹ ದೈಹಕ ಮತ್ತು ಮಾನಸಿಕ ಹಿಂಸೆ, ಕಿರುಕುಳ ನೀಡಿದಲ್ಲಿ ಹತ್ತಿರದ ಸಖಿ ಒನ್ ಸ್ಟಾಪ್ ಸೆಂಟರ್ ಅಥವಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಪರ್ಕಿಸಿ ಸಲಹೆ ಸೂಚನೆಗಳನ್ನು ಪಡೆಯಬಹುದು. ಇದಕ್ಕೆ ಸಂಬಂಧಿಸಿದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಕಾರದ ವತಿಯಿಂದ ಉಚಿತ ಕಾನೂನು ನರೆವು ನೀಡಲು 40 ವಕೀಲರಿದ್ದಾರೆ. ಇದನ್ನು ಪ್ರತಿಯೊಬ್ಬರು ಸದುಪಯೋಗಪಡೆದುಕೊಳ್ಳಬೇಕು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಉಚಿತ ಕಾನೂನು ಸೇವೆಗಳ ಕುರಿತು ಮಾಹಿತಿ ನೀಡಲು 15100 ಸಹಾಯವಾಣಿ ಸಂಖ್ಯೆ ಸ್ಥಾಪಿಸಿದ್ದು, ಕರೆ ಮಾಡಿ ಸೂಕ್ತ ಕಾನೂನು ಸಲಹೆ ಪಡೆಯಬಹುದು. ಸಮಾಜದಲ್ಲಿ ಹಿಂದುಳಿದ ಪ್ರತಿಯೊಬ್ಬರನ್ನು ಮುಖ್ಯವಾಹಿನಿಗೆ ತರಲು ಕಂಕಣಬದ್ದರಾಗಿ ಕಾರ್ಯನಿರ್ವಹಿಸಬೇಕು. ಈ ಎರಡೂ ಕಾಯ್ದೆಗಳು ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಮತ್ತು ಸುರಕ್ಷತೆಯನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಹೇಳಿದರು.

ಇದೇ ವೇಳೆ ನೆರಳು ಬೀಡಿ ಕಾರ್ಮಿಕ ಯೂನಿಯನ್ ಅಧ್ಯಕ್ಷೆ ಜಬೀನಾ ಖಾನಂ ಸಂವಿಧಾನ ಪೀಠಿಕೆ ವಾಚಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್ ಕುಮಾರ್, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಿಯದರ್ಶಿನಿ, ತಾಲ್ಲೂಕು ಆರೋಗ್ಯಾಧಿಕಾರಿ ದೇವರಾಜ್ ಪಟ್ಟಿಗೆ, ಸಖಿ ಕೇಂದ್ರದ ಕಾನೂನು ಸಲಹೆಗಾರರಾದ ತಂಜಿಮ್ ಕೌಸರಿ, ನಗರ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಡಾ.ಎನ್.ರೇಖಾ, ನೆರಳು ಬೀಡಿ ಕಾರ್ಮಿಕ ಯೂನಿಯನ್ ಪ್ರಧಾನ ಕಾರ್ಯದರ್ಶಿ ಎಂ.ಕರಿಬಸಪ್ಪ, ಸದಸ್ಯೆ ಸಬ್ರಿನ್ ತಾಜ್ ಸೇರಿದಂತೆ ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು ಇದ್ದರು.



ಚಳ್ಳಕೆರೆ ನಗರದ ಸಾಯಿಬಾಬಾ ಮಂದಿರದಲ್ಲಿ ಗುರುವಾರ ನಡೆದ ಲೋಕಕಲ್ಯಾಣವಾಗಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಶಾಸಕ ಟಿ.ರಘುಮೂರ್ತಿಯವರನ್ನು ವೆಂಕಟಸಾಯಿಸೇವಾಟ್ರಸ್ಟ್‌ವತಿಯಿಂದ ಸನ್ಮಾನಿಸಲಾಯಿತು. ಟ್ರಸ್ಟ್ ಅಧ್ಯಕ್ಷ ಸಂಜೀವಮೂರ್ತಿ ಮೊದಲಾದವರು ಇದ್ದರು.

## ಪೌರ ಕಾರ್ಮಿಕರಿಗೆ ನೀರಿನ ಕಾಪರ್ ಬಾಟಲ್‌ಗಳ ವಿತರಣೆ




» ಚಿತ್ರದುರ್ಗ

ದಿನನಿತ್ಯವು ನಗರ ಸ್ವಚ್ಚತೆಯಲ್ಲಿ ತೊಡಗುವ ನೀವುಗಳು ಶುದ್ದವಾದ ನೀರನ್ನೆ ಕುಡಿಯಿರಿ ಎಂದು ನಗರಸಭೆ ಅಧ್ಯಕ್ಷೆ ಸುಮಿತ ಪೌರ ನೌಕರರಿಗೆ ತಿಳಿಸಿದರು. ನಗರಸಭೆ ಕೌನ್ಸಿಲ್ ಸಭಾಂಗಣದಲ್ಲಿ ಗುರುವಾರ ಪೌರ ಕಾರ್ಮಿಕರಿಗೆ ಕಾಪರ್ ಬಾಟಲ್‌ಗಳನ್ನು ವಿತರಿಸಿ ಮಾತನಾಡಿದರು.

ಬೆಳಿಗ್ಗೆ ನೀವುಗಳು ಮನೆಯಿಂದ ಹೊರಡುವಾಗ ಕಾಪರ್ ಬಾಟಲ್‌ಗಳಲ್ಲಿ ಬಿಸಿನೀರು ಇಲ್ಲವೆ ತಣ್ಣೀರನ್ನು ತುಂಬಿಸಿಕೊಂಡು ಬನ್ನಿ. ಉಪಹಾರದ ನಂತರ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿನ ನೀರು ಕುಡಿಯುವ ಬದಲು ಕಾಪರ್ ಬಾಟಲ್‌ನಲ್ಲಿನ ನೀರು ಕುಡಿದು ಉತ್ತಮ ಆರೋಗ್ಯ ಕಾಪಾಡಿಕೊಳ್ಳಿ. ಇದರಿಂದ ಕಿಡ್ನಿ ಇನ್ನಿತರೆ ಪ್ರಮುಖ ಅಂಗಾಂಗಳಿಗೆ ತೊಂದರೆಯಾಗುವುದಿಲ್ಲ. ಯಾವುದೇ ಕಾರಣಕ್ಕೂ ಬಾಟಲ್‌ಗಳನ್ನು ಮನೆಯಲ್ಲಿಟ್ಟು ಬರಬೇಡಿ ಎಂದು ಹೇಳಿದರು.ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸೈಯದ್ ನಸ್ರುಲ್ಲಾ ಮಾತನಾಡಿ ಪೌರ ನೌಕರರ ಆರೋಗ್ಯದ ದೃಷ್ಟಿಯಿಂದ ಕಾಪರ್ ನೀರಿನ ಬಾಟಲ್‌ಗಳನ್ನು ಖರೀಧಿಸಿ ನೀಡಲಾಗುತ್ತಿದೆ. ಪ್ರತಿನಿತ್ಯವೂ ಈ ಬಾಟಲಿಯಲ್ಲಿನ ನೀರು ಸೇವಿಸಿ ಎಲ್ಲೆಂದರಲ್ಲಿ ಸಿಕ್ಕ ನೀರನ್ನು ಕುಡಿದು ಆರೋಗ್ಯ ಹದಗೆಡಿಸಿಕೊಳ್ಳುವುದು ಬೇಡ ಎಂದು ಸಲಹೆ ನೀಡಿದರು.ಹೆಲ್ತ್ ಇನ್ಸ್‌ಪೆಕ್ಟರ್‌ಗಳಾದ ನಿರ್ಮಲ, ಹೀನಾಕೌಸರ್, ರುಕ್ಮಿಣಿ, ಭಾರತಿ, ಬಾಬುರೆಡ್ಡಿ ಇವರುಗಳು ಈ ಸಂದರ್ಭದಲ್ಲಿದ್ದರು.



ರಾಜ್ಯದ ನೂತನ ಪೋಲಿಸ್ ಮಹಾ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡ ಹಿರಿಯ ಐಪಿಎಸ್ ಅಧಿಕಾರಿ ಸಲೀಂ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿನಂದಿಸಿದರು. ಪೊಲೀಸ್ ಮಹಾ ನಿರ್ದೇಶಕರಾಗಿ ಸೇವೆಯಿಂದ ನಿವೃತ್ತರಾದ ಅಲೋಕ್ ಮೋಹನ್ ಅವರಿಗೆ ಮುಖ್ಯಮಂತ್ರಿಗಳು ಶುಭ ಹಾರೈಸಿದರು. ಗೃಹ ಸಚಿವ ಡಾ. ಜಿ. ಪರಮೇಶ್ವರ ಹಾಜರಿದ್ದರು.

## ಡಾ.ಬಿ.ಆರ್.ಅಂಬೇಡ್ಕರ್ ದಲಿತ ಸಂಘ ಉದ್ಘಾಟನೆ

» ಚಿತ್ರದುರ್ಗ



ಮಹಾನ್ ಮಾನವತಾವಾದಿ ಡಾ.ಬಿ.ಆರ್. ಅಂಬೇಡ್ಕರ್‌ರವರ ವಿಚಾರ ಧಾರೆಗಳನ್ನು ಪ್ರತಿಯೊಬ್ಬರು ಪಾಲಿಸಬೇಕೆಂದು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎ.ಸಾಧಿಕ್‌ವುಲ್ಲಾ ತಿಳಿಸಿದರು.ಬಸವ ಮಂಟಪದಲ್ಲಿ ಗುರುವಾರ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿ ಅಂಬೇಡ್ಕರ್ ದಲಿತ ಸಂಘ ಉದ್ಘಾಟಿಸಿ ಮಾತನಾಡಿದರು.

ಅಂಬೇಡ್ಕರ್‌ರವರು ದೇಶಕ್ಕೆ ಭದ್ರವಾದ ಸಂವಿಧಾನವನ್ನು ಕೊಟ್ಟಿರುವುದರ ಫಲವಾಗಿ ಎಲ್ಲಾ ಜಾತಿ ಧರ್ಮದವರಿಗೂ ಸಮಾನತೆ ಸಿಕ್ಕಿದೆ. ವಿಶ್ವಕ್ಕೆ ನಮ್ಮ ದೇಶದ ಸಂವಿಧಾನ ಮಾದರಿಯಾಗಿದೆ. ಸಂವಿಧಾನವನ್ನು ಗೌರವಿಸುವವರು ಜಾತಿ ಧರ್ಮದ ನಡುವೆ ದ್ವೇಷ ಬಿತ್ತುವುದಿಲ್ಲ. ಡಾ.ಬಿ.ಆರ್.ಅಂಬೇಡ್ಕರ್‌ರವರ ಆಶಯದಂತೆ ಶಿಕ್ಷಣ, ಸಂಘಟನೆ ಹೋರಾಟಕ್ಕೆ ಒತ್ತು ಕೊಡಿ ಎಂದು ಅಂಬೇಡ್ಕರ್ ದಲಿತ ಸಂಘದ ಪದಾಧಿಕಾರಿಗಳಿಗೆ ಕರೆ ನೀಡಿದರು.

ಲೇಖಕ ಹೆಚ್.ಆನಂದ್‌ಕುಮಾರ್ ಮಾತನಾಡಿ ದಲಿತ ಚಳುವಳಿಯಿಲ್ಲದಿದ್ದರೆ ಅಸಮಾನತೆ ಕಡಿಮೆಯಾಗುತ್ತಿರಲಿಲ್ಲ. ಗೌತಮ ಬುದ್ದ ಮೊದಲು ಅಸಮಾನತೆಯನ್ನು ಗುರುತಿಸಿದರು. ಹನ್ನೆರಡನೆ ಶತಮಾನದ ಬಸವಣ್ಣ ಕೂಡ ಬುದ್ದನ ಹಾದಿಯಲ್ಲಿ ಸಾಗಿದರು. ಪ್ರಥಮ ಬಾರಿಗೆ ಮಹಿಳೆಗೆ ಸಮಾನತೆ ಕೊಟ್ಟ ಅಂಬೇಡ್ಕರ್‌ರವರನ್ನು ಎಲ್ಲರೂ ಓದಬೇಕು. ಸಂವಿಧಾನ ಧ್ವನಿ ಇಲ್ಲದವರಿಗೆ ಶೋಷಿತರಿಗೆ, ದಲಿತರಿಗೆ, ಬಡವರಿಗೆ ಎಲ್ಲಾ ಜಾತಿ ಧರ್ಮದವರಿಗೆ ಅವಕಾಶ ಕೊಟ್ಟಿದೆ ಎಂದು ಹೇಳಿದರು.ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ದಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ವೈ.ಕುಮಾರ್, ಕಣಿವೆ ಮಾರಮ್ಮ ಸಂಘದಅಧ್ಯಕ್ಷ ತಿಪ್ಪೇಸ್ವಾಮಿ, ಕುಮಾರಸ್ವಾಮಿ, ಅಂಬೇಡ್ಕರ್ ದಲಿತ ಸಂಘದ ಅಧ್ಯಕ್ಷ ಕಿರಣ್, ಕಾರ್ಯಾಧ್ಯಕ್ಷ ಲೋಹಿತ್, ರಮೇಶ್ ಇವರುಗಳು ವೇದಿಕೆಯಲ್ಲಿದ್ದರು.

ಇದೇ ವೇಳೆ ಅನೇಕ ಯುವಕರು ರಕ್ತದಾನ ಮಾಡಿದರು.ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಉಪ ಸಭಾಪತಿ ಅರುಣ್‌ಕುಮಾರ್, ಮಜಹರ್‌ವುಲ್ಲಾ, ಎಸ್.ವೀರೇಶ್ ಹಾಗೂ ಸಂಘದ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

# ಮೇ.24 ರಿಂದ ಮೈಸೂರಿನಿಂದ ಪಾದಯಾತ್ರೆ ಆರಂಭ

» ಚಿತ್ರದುರ್ಗ



ಒಳ ಮೀಸಲಾತಿ ಜಾರಿಗಾಗಿ ಜಿಲ್ಲೆಯಲ್ಲಿ 77 ದಿನಗಳ ಕಾಲ ನಡೆದ ರಥಯಾತ್ರೆಯನ್ನು ಅಂತ್ಯಗೊಳಿಸಿ ಮೇ.24 ರಿಂದ ಮೈಸೂರಿನ ಚಾಮುಂಡಿ ಬೆಟ್ಟದಿಂದ ಆರಂಭಗೊಳ್ಳುವ ಕ್ರಾಂತಿಕಾರಿ ಪಾದಯಾತ್ರೆ ಜೂ.9 ರಂದು ಬೆಂಗಳೂರು ತಲುಪಲಿದೆ ಎಂದು ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿಯ ಬಿ.ಆರ್.ಭಾಸ್ಕರ್‌ಪ್ರಸಾದ್ ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಒಳ ಮೀಸಲಾತಿ ಜಾರಿಗೊಳಿಸುವತನಕ ಹೊಸ ನೇಮಕಾತಿ, ಬ್ಯಾಕ್‌ಲಾಗ್ ಹುದ್ದೆ ಹಾಗೂ ಬಡ್ತಿಯಲ್ಲಿ ಮೀಸಲಾತಿಯನ್ನು ನಿಲ್ಲಿಸುವಂತೆ ಸರ್ಕಾರಕ್ಕೆ ಬೇಡಿಕೆಯಿಟ್ಟಿದ್ದೆವು. ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ ಕ್ಯಾಬಿನೆಟ್‌ನಲ್ಲಿ ಆದ ತೀರ್ಮಾನ, ಮುಖ್ಯಮಂತ್ರಿಯ ಆದೇಶವನ್ನು ಮೀರಿ ಹೊಸ ನೇಮಕಾತಿ, ಬಡ್ತಿ ಪ್ರಕ್ರಿಯೆಯನ್ನು ಮುಂದುವರೆಸಿ ಕೋಟ್ಯಾಂತರ ರೂ. ಗಳ ಅವ್ಯವಹಾರ ಎಸಗಿದ್ದಾರೆ. ಬಡ್ತಿ ನೇಮಕಾತಿ ಯದ್ಧೋಪಾದಿಯಲ್ಲಿ ನಡೆಯುತ್ತಿರುವುದನ್ನು ತಡೆಹಿಡಿಯದಿದ್ದರೆ ದಲಿತರಿಗೆ ಭಾರಿ ಅನ್ಯಾಯವಾಗುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅನ್ನ ತಿನ್ನುವ ನಾಲಿಗೆಯಾದರೆ ಹೇಳಿದ ಮಾತಿನಂತೆ ನಡೆದುಕೊಳ್ಳಬೇಕು. ರಾಹುಲ್‌ಗಾಂಧಿ, ಪ್ರಿಯಾಂಕಗಾಂಧಿ, ಹೆಚ್.ಸಿ.ಮಹದೇವಪ್ಪನವರಿಗೆ ದಲಿತರ ಮೇಲೆ ಏಕೆ ದ್ವೇಷ ಎಂದು ಪ್ರಶ್ನಿಸಿದರು.?

ಮೈಸೂರಿನ ಚಾಮುಂಡಿ ಬೆಟ್ಟದಿಂದ ಅರೆಬೆತ್ತಲೆ ಮೆರವಣಿಗೆ, 25 ರಂದು ಮೈಸೂರು ಡಿ.ಸಿ.ಕಚೇರಿ ಎದುರು ಮೈಮೇಲೆ ಮಲ ಸುರಿದುಕೊಳ್ಳುತ್ತೇವೆ. 26 ರಂದು ಸಚಿವರ ಮುಖವಾಡಗಳನ್ನು ಧರಿಸಿ ಕೆರೆದ ಹಾರ ಹಾಕಿಕೊಳ್ಳುತ್ತೇವೆ. ಸಚಿವರುಗಳಾದ ಡಾ.ಜಿ.ಪರಮೇಶ್ವರ, ಹೆಚ್.ಸಿ.ಮಹದೇವಪ್ಪ ಇವರುಗಳು ಪ್ರತಿಕೃತಿಯನ್ನು ಕತ್ತೆಗಳ ಮೇಲೆ ಮೆರವಣಿಗೆ ಮಾಡುತ್ತೇವೆಂದು ಎಚ್ಚರಿಸಿದರು. ನಮ್ಮದೆ ಸಮುದಾಯದ ಸಚಿವರುಗಳು ಅಸಹಾಯಕರಾಗಿ ಗೇಟ್‌ಕೀಪರ್‌ಗಳಂತೆ ವರ್ತಿಸುತ್ತಿದ್ದಾರೆ. ಕ್ರಾಂತಿಕಾರಿ ಪಾದಯಾತ್ರೆಯ ಮೊದಲನೆ ದಿನ ನಮ್ಮನ್ನು ನಾವು ದಂಡಿಸಿಕೊಳ್ಳಲು ಚಾಟಿಯಿಂದ ಹೊಡೆದುಕೊಳಂಡು ನಾವುಗಳು ಮತ ನೀಡಿ ನಿಮ್ಮನ್ನು ಆಯ್ಕೆ ಮಾಡಿದ್ದಕ್ಕೆ ಕ್ಷಮೇ ಕೇಳುತ್ತೇವೆ. ಮಾದಿಗ ಸಮುದಾಯಕ್ಕೆ ಅನಾಥ ಪ್ರಜ್ಞೆ ಕಾಡುತ್ತಿದೆ. ಹಾಗಾಗಿ ಬಡ್ತಿ ನಿಲ್ಲಿಸಿ ಒಳ ಮೀಸಲಾತಿ ಜಾರಿಗೊಳಿಸಿ ಇಲ್ಲದೆ ಹೋದಲ್ಲಿ ಕ್ರಾಂತಿಕಾರಿ ಹೋರಾಟ ಉಗ್ರ ಸ್ವರೂಪ ಪಡೆದುಕೊಳ್ಳುತ್ತದೆಂದು ಹೇಳಿದರು. ಬಾಳೆಕಾಯಿ ಶ್ರೀನಿವಾಸ್, ಮಹಲಿಂಗಪ್ಪ ಕುಂಚಿಗನಹಾಳ್, ಹನುಮಂತಪ್ಪದುರ್ಗಾ, ರಾಜಣ್ಣ, ಸುರೇಶ್, ಪ್ರಭುರಾಜ್ ಕೊಡ್ಲಿ, ನ್ಯಾಯವಾದಿ ಅವಿನಾಶ್, ರುದ್ರಮುನಿ ಹಾಜರಿದ್ದರು.

ಫಾಸ್ಟ್ ನ್ಯೂಸ್

## ಜಾತಿನಿಂದನೆ ಆರೋಪ: ಶಿಕ್ಷಣ ಸಂಸ್ಥೆ ವಿರುದ್ಧ ಕ್ರಮಕ್ಕೆ ಒತ್ತಾಯ



» **ಹೊಸದುರ್ಗ**


ತಾಲ್ಲೂಕಿನ ಖಾಸಗಿ ಶಿಕ್ಷಣ ಸಂಸ್ಥೆಯೊಂದರಲ್ಲಿ ಚಾಲಕ ವೃತ್ತಿಗೆ ಕರೆಯಿಸಿಕೊಂಡು ಚಾಲಕನ ಜಾತಿ ತಿಳಿದುಕೊಂಡ ಮೇಲೆ ಕೆಲಸ ನೀಡಲು ನಿರಾಕರಿಸಿದ ಶಿಕ್ಷಣ ಸಂಸ್ಥೆಯ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ದಲಿತ ಸಂಘರ್ಷ ಸಮಿತಿ ಹಾಗೂ ಕರ್ನಾಟಕ ಭೀಮ್ ಸೇನೆ ಒತ್ತಾಯಿಸಿದೆ.ಈ ಕುರಿತು ತಹಶೀಲ್ದಾರ್‌ರವರಿಗೆ ಮನವಿ ಪತ್ರ ಸಲ್ಲಿಸಿದ ದಲಿತ ಸಂಘಟನೆ ಕಾರ್ಯಕರ್ತರು, ತಾಲ್ಲೂಕಿನ ಅರಳಿಹಳ್ಳಿ ಗೇಟ್ ಸಮೀಪದ ಆಕ್ಸರ್ಡ್ ಶಾಲೆಯ ವ್ಯವಸ್ಥಾಪಕಿ ಲತಾ ಇವರು ಸಿ.ಮಂಜುನಾಥ ಎಂಬ ಯುವಕನನ್ನು ಚಾಲಕ ವೃತ್ತಿ ಕೆಲಸಕ್ಕೆ ಕರೆಯಿಸಿಕೊಂಡು, ಅವರ ಜಾತಿ ಯಾವುದೆಂದು ಕೇಳಿ, ಮಾದಿಗ ಎಂದು ಗೊತ್ತಾದ ಬಳಿಕ, ಲತಾ ಅವರು ಶಾಲೆಯ ಆವರಣದಲ್ಲಿ ಲಿಂಗಮುದ್ರೆ ಇದೆ. ಇಲ್ಲಿ ನಿಮ್ಮ ಜಾತಿಯವರು ಓಡಾಡುವ ಹಾಗಿಲ್ಲ. ನಿಮ್ಮ ಜಾತಿಯವರು ನಮ್ಮ ಸಂಸ್ಥೆಯಲ್ಲಿ ಕೆಲಸ ಮಾಡುವ ಹಾಗಿಲ್ಲ. ಇದರಿಂದ ನಮ್ಮ ದೇವರಿಗೆ ಹಾಗೂ ನಮ್ಮ ಜಾತಿಗೆ ಮೈಲಿಗೆ ಆಗುತ್ತದೆ ಎಂದು ಹೇಳಿ ವಾಪಾಸ್ ಕಳುಹಿಸಿರುತ್ತಾರೆ ಎಂದು ಆರೋಪಿಸಲಾಗಿದೆ. ವರ್ಣ, ವರ್ಗ, ಜಾತಿ, ಲಿಂಗಬೇದವಿಲ್ಲದೆ ಶಿಕ್ಷಣ ನೀಡುವ ಶಿಕ್ಷಣ ಸಂಸ್ಥೆಯಲ್ಲಿ ಈ ರೀತಿಯ ಅಮಾನವೀಯ ಜಾತಿ ನಿಂದನೆ ಮಾಡಿರುವುದು ಅಪರಾಧವಾಗಿದ್ದು, ಶಿಕ್ಷಣ ಸಂಸ್ಥೆಯ ಅನುಮತಿಯನ್ನು ರದ್ದುಗೊಳಿಸಿ, ಸಂಸ್ಥೆಯವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ತಹಶೀಲ್ದಾರ್‌ಗೆ ಮನವಿ ಸಲ್ಲಿಸಲಾಗಿದೆ.ಈ ಸಂದರ್ಭದಲ್ಲಿ ಮಾದಿಗ ಸಮಾಜದ ಮುಖಂಡ ಮುದ್ದಣ್ಣ, ಶಂಕ್ರಪ್ಪ, ಮೈಲಾರಪ್ಪ, ಮಾರುತಿ, ಕಾಂತರಾಜ್, ಕರ್ನಾಟಕ ಭೀಮ್‌ಸೇನೆ ಅಧ್ಯಕ್ಷ ರವಿಕುಮಾರ್ ಮತ್ತು ದಲಿತ ಸಂಘರ್ಷ ಸಮಿತಿ ಸಂಚಾಲಕರಾದ ಗಿರೀಶ್, ರಂಗಸ್ವಾಮಿ, ಸೇರಿದಂತೆ ಮತ್ತಿತರರು ಇದ್ದರು.

## ಜನರ ಸಮಸ್ಯೆಗಳಿಗೆ ಮಿಡಿಯುವ ಹೃದಯ ನಿಜವಾದ ನಾಯಕತ್ವ

» **ಹರಿಹರ**

ಜನರ ಸಮಸ್ಯೆಗಳಿಗೆ ಮಿಡಿಯುವ ಹೃದಯ ಹಾಗು ಹೋರಾಟದ ಮನೋಭಾವನೆಯೇ ನಿಜವಾದ ನಾಯಕತ್ವವಾಗಿದೆ ಎಂದು ಫಯಾಜ್ ಅಹಮದ್ ಎಸ್ ಡಿ ಪಿ ಐ ರಾಜ್ಯ ಸಮಿತಿ ಸದಸ್ಯರಾದ ಫಯಾಝ್ ಅಹಮದ್ ಹೇಳಿದರು.

ನಗರದ ಅಂಜುಮನ್ ಶಾದಿ ಹಾಲ್ ನಲ್ಲಿ ಮಂಗಳವಾರ ಸಂಜೆ ಎಸ್‌ಡಿಪಿಐ ಪಕ್ಷದ ವತಿಯಿಂದ "ದಿಟ್ಟ ನಾಯಕತ್ವ  ಬಲಿಷ್ಠ ಕಾರ್ಯಕರ್ತ" ಎಂಬ ಘೋಷವಾಕ್ಯದಡಿಯಲ್ಲಿ ಕಾರ್ಯಕರ್ತರು ಮತ್ತು ಸದಸ್ಯರ ವಿಶೇಷ ಸಮಾವೇಶದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು,ನಿಜವಾದ ನಾಯಕತ್ವವೆಂದರೆ ಜನರ ಸಮಸ್ಯೆಗಳಿಗೆ ಮಿಡಿಯುವ ಮತ್ತು ಹೋರಾಟದ ಮನೋಭಾವನೆ ಅಗತ್ಯ ಎಂದು ತಿಳಿಸಿದರು. ನಮ್ಮ ಕಾರ್ಯಕರ್ತರು ಸಮಾಜದಲ್ಲಿ ನಿಸ್ವಾರ್ಥ ಸೇವೆಯ ಮೂಲಕ ಪಕ್ಷದ ಮೌಲ್ಯಗಳನ್ನು ಸಾರಬೇಕು. ಎಸ್‌ಡಿಪಿಐ ಪಕ್ಷವು ಸಂವಿಧಾನಾತ್ಮಕ ಹಕ್ಕುಗಳ ಮತ್ತು ಸಮಾಜದ ನ್ಯಾಯದೊಂದಿಗೆ ನಿಂತಿರುವ ಪಕ್ಷವಾಗಿದೆ ಎಂಬುದನ್ನು ಅವರು ಒತ್ತಿ ಹೇಳಿ,ಪಕ್ಷದ ಸಂಘಟನೆ, ಸಮಾಜ ಸೇವೆ, ಮತ್ತು ರಾಜಕೀಯ ಸಜೀವತೆಯ ಕುರಿತು ಸವಿಸ್ತಾರವಾದ ಚರ್ಚೆಯನ್ನು ಮಾಡಿದರು. ಕಾರ್ಯಕ್ರಮದಲ್ಲಿ ಸ್ಥಳೀಯ ಹಾಗೂ ಜಿಲ್ಲಾಮಟ್ಟದ ನಾಯಕ ರೂ ಸಹ ಭಾಗವಹಿಸಿದ್ದರು. ಸಭೆಯಲ್ಲಿ ಅಂತ್ಯದಲ್ಲಿ ಬಲಿಷ್ಠ ಸಂಘಟನೆ ನಿರ್ಮಾಣಕ್ಕೆ ಶ್ರದ್ಧೆ ಮತ್ತು ಸಂಕಲ್ಪ ಕೈಗೊಳ್ಳಲಾಯಿತು. . ವೇದಿಕೆಯಲ್ಲಿ ಎಸ್ ಡಿ ಪಿ ಐ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ. ಆರ್.ತಾಹೀರ್,ಜಿಲ್ಲಾ ಕೋಶಾಧಿಕಾರಿ ಮೊಹಮ್ಮದ್‌ಅಜರುದ್ದೀನ್,ಜಿಲ್ಲಾಕಾರ್ಯದರ್ಶಿ ಮೊಹಮ್ಮದ್ ಜುನೈದ್ ಉಪಸ್ಥಿತರಿದ್ದರು.



# ಜಾತಿ ಎಂಬ ಹುಚ್ಚು ಪರಿಕಲ್ಪನೆ ಮತ್ತು ಶ್ರೇಷ್ಠತೆಯ ವ್ಯಸನ.....

**ಕುಲ ಕುಲ ಕುಲವೆಂದು**
**ಹೊಡೆದಾಡದಿರಿ, ನಿಮ್ಮ ಕುಲದ**
**ನೆಲೆಯನೇನಾದರೂ ಬಲ್ಲಿರಾ**
**ಕನಕದಾಸರು,**
**ಮಾನವ ಕುಲ ತಾನೊಂದು ವಲಂ**
**ಮಹಾಕವಿ ಪಂಪ,**

**ಸಕಲ ಜೀವಾತ್ಮಗಳಿಗೆ ಲೇಸನೇ ಬಯಸು**
**ಬಸವಣ್ಣ,**

**ವಿಶ್ವ ಮಾನವ ಪ್ರಜ್ಞೆ**
**ಕುವೆಂಪು,**

**ವಸುದೈವ ಕುಟುಂಬ ಭಗವದ್ಗೀತೆ,**

**ಸರ್ವೋದಯ**
**ಮಹಾತ್ಮ ಗಾಂಧಿ,**

**"ಭಾರತೀಯರಾದ ನಾವು "**
**ಸಂವಿಧಾನದ ಪೀಠಿಕೆ**
**ಬಾಬಾ ಸಾಹೇಬ್ ಅಂಬೇಡ್ಕರ್,**

ಹೀಗೆ ಈ ನೆಲದ ದಾರ್ಶನಿಕರು, ಚಿಂತಕರು, ಹೋರಾಟಗಾರರು, ಮಹಾತ್ಮರು ಹೇಳಿದ್ದಾರೆ. ಆದರೆ ಈಗ ಕರ್ನಾಟಕದಲ್ಲಿ ಜಾತಿ ಜನಗಣತಿಯ ವಿವಾದ ಭುಗಿಲೆದ್ದಿರುವಾಗ ನನಗೆ ಅನಿಸುತ್ತಿದೆ " ಹುಚ್ಚರ ಸಂತೆ ಕಣಣ್ಣ ಇದು ಹುಚ್ಚರ ಸಂತೆ, ಹೇಳುವುದು ಒಂದು ಮಾಡುವುದು ಇನ್ನೊಂದು, ಬಾಯಲ್ಲಿ ಬೆಣ್ಣೆ ಕೈಯಲ್ಲಿ ದೊಣ್ಣೆ "

ಬಹುತೇಕ ಎಲ್ಲಾ ಜಾತಿವಾದಿಗಳ ಮುಖವಾಡಗಳು ಕಳಚಿ ಬೀಳುತ್ತಿದೆ. ಎಷ್ಟೊಂದು ಅಸಹ್ಯ ಹುಟ್ಟಿಸುತ್ತಿದೆ.

ಬ್ರಾಹ್ಮಣನೊಬ್ಬನೆಂದ,

ನಾವೇ ಶ್ರೇಷ್ಠರು, ದೇವರಿಗೆ ನಾವೇ ಹತ್ತಿರ, ನಾವು ದೇವರ ಪ್ರತಿನಿಧಿಗಳು,

ವೈಶ್ಯನೊಬ್ಬನೆಂದ,

ನಾವೇ ಶ್ರೇಷ್ಠರು, ನಾವು ವ್ಯಾಪಾರ ಮಾಡದಿದ್ದರೆ ಸಮಾಜ ಅಸ್ತಿತ್ವದಲ್ಲೇ ಇರುವುದಿಲ್ಲ, ದೇವರಿಗೆ ನಾವೇ ಅತಿಮುಖ್ಯ,

ಕ್ಷತ್ರಿಯನೊಬ್ಬನೆಂದ,

ನಾವೇ ಶ್ರೇಷ್ಠರು, ಸಮಾಜವನ್ನು ರಕ್ಷಿಸುವವರು ನಾವೇ, ನಾವಿಲ್ಲದಿದ್ದರೆ ಅರಾಜಕತೆ ಸೃಷ್ಟಿಯಾಗುತ್ತದೆ, ದೇವರಿಗೆ ನಾವೇ ಹತ್ತಿರ,

ಒಕ್ಕಲಿಗನೊಬ್ಬನೆಂದ,

ನಾವೇ ಶ್ರೇಷ್ಠರು, ನಾವು ವ್ಯವಸಾಯ ಮಾಡದಿದ್ದರೆ ತಿನ್ನಲು ಆಹಾರವೇ ಇರುವುದಿಲ್ಲ, ನಾವು ದೇವರ ಮಕ್ಕಳು,

ಅಗಸನೊಬ್ಬನೆಂದ,

ನಾವೇ ಶ್ರೇಷ್ಠರು, ನಾವು ಜನರ ಕೊಳೆ ಬಟ್ಟೆ ಶುಭ್ರ ಮಾಡಿಕೊಡುತ್ತೇವೆ. ನಾವಿಲ್ಲದಿದ್ದರೆ ಜನ ಕೊಳಕರಾಗುತ್ತಾರೆ,

ದೇವರಿಗೆ ನಾವೇ ಹತ್ತಿರ,

ಕ್ಷೌರಿಕನೊಬ್ಬನೆಂದ,

ನಾವೇ ಶ್ರೇಷ್ಠರು, ಜನರು ಚೆಂದ ಕಾಣಲು, ಮಂಗಳ ಕಾರ್ಯ ಮಾಡಲು ನಾವೇ ಬೇಕು, ದೇವರಿಗೆ ವಾಧ್ಯ ನುಡಿಸಿ ಖುಷಿಪಡಿಸುವವರೇ ನಾವು,

ಕುಂಬಾರನೊಬ್ಬನೆಂದ,

ನಾವೇ ಶ್ರೇಷ್ಠರು, ಜನ ಅಡುಗೆ ಮಾಡಿ ಊಟ ಮಾಡಲು ನಾವು ಮಾಡುವ ಮಡಿಕೆಗಳೇ ಬೇಕು, ನಾವಿಲ್ಲದೆ ಊಟವಿಲ್ಲ, ದೇವರಿಗೆ ನಾವೇ ಹತ್ತಿರ,

ಕುರುಬನೊಬ್ಬನೆಂದ,

ನಾವೇ ಶ್ರೇಷ್ಠರು, ಹಸು ಆಡು ಕುರಿಗಳನ್ನು ಸಾಕಿ ಬೆಳೆಸಿ ಜನರಿಗೂ, ದೇವರಿಗೂ ಹಾಲು ತುಪ್ಪ ಎಲ್ಲಾ ನಮ್ಮಿಂದಲೇ, ನಾವೇ ದೇವರಿಗೆ ಹತ್ತಿರ,

ಚಮ್ಮಾರನೊಬ್ಬನೆಂದ,

ನಾವೂ ಶ್ರೇಷ್ಠರೇ, ನೀವು ಕಾಲಿನ ರಕ್ಷಣೆಗೆ ಹಾಕುವ ಚಪ್ಪಲಿ, ವ್ಯವಸಾಯಕ್ಕೆ ಬಳಸುವ ಸಲಕರಣೆಗಳು, ದೇವರ ರಕ್ಷಣೆಗೆ ಕಟ್ಟುವ ಕಟ್ಟಡ, ಯುದ್ಧಕ್ಕೆ ಉಪಯೋಗಿಸುವ ಆಯುಧ, ಎಲ್ಲಾ ನಾವೇ ತಯಾರಿಸುವುದು,

ನಾವೇ ದೇವರ ನಿಜವಾದ ಮಕ್ಕಳು......

ಅಯ್ಯೋ ಹುಚ್ಚರ, ಇದು 2025, ನಿಮ್ಮ ಶ್ರೇಷ್ಠತೆ ನಾಶವಾಗಿ ಬಹಳ ಕಾಲವಾಗಿದೆ. ಇಂದು ನಿಮ್ಮ ಕೆಲಸಗಳು ಯಾರಿಗೂ ಅನಿವಾರ್ಯವಲ್ಲ. ಅವು ಜಾತಿ ಮೀರಿ ಹೊಟ್ಟೆ ಪಾಡಿನ ಕಾಯಕಗಳಾಗಿ ಯಾರು ಬೇಕಾದರೂ ಮಾಡಬಹುದಾದ ನಾನಾ ರೂಪ ಪಡೆದುಕೊಂಡಿದೆ.

ಬ್ರಾಹ್ಮಣನೊಬ್ಬ ಶೌಚಾಲಯಗಳ ಅಟಜಚಿಟುಟಿರ ಅಂಟಿಣಡಿಚಿಛಿಣ ಪಡೆದರೆ, ಗೌಡನೊಬ್ಬ ಚಪ್ಪಲಿ ಅಂಗಡಿ ಇಟ್ಟರೆ, ದಲಿತನೊಬ್ಬ ಹೋಟೆಲ್ ನಡೆಸಿದರೆ, ಲಿಂಗಾಯಿತನೊಬ್ಬ ಕ್ಷೌರದ ಅಂಗಡಿ ಇಟ್ಟರೆ, ತಿಗಳರವನೊಬ್ಬ ಪೂಜಾರಿಯಾದರೆ, ಉಪ್ಪಾರನೊಬ್ಬ ಜ್ಯೋತಿಷಿಯಾಗುತ್ತಾನೆ,

ಇನ್ನು ಸರ್ಕಾರಿ ಅಧಿಕಾರಿಗಳು, ನಗರದಲ್ಲಿ ವ್ಯಾಪಾರ ಮಾಡುವವರು, ಖಾಸಗಿ ಕಂಪನಿ ಅಧಿಕಾರಿಗಳು ಯಾರು ಯಾರೋ ತಿಳಿದವರಿಲ್ಲ, ಎಲ್ಲರೂ ಕೇವಲ ಹೊಟ್ಟೆ ಪಾಡಿನ ನರಮಾನವರು,

ಕಳ್ಳರು, ಖೈದಿಗಳು, ರೋಗಿಗಳು, ಭ್ರಷ್ಟರು, ಕೊಲೆಗಡುಕರು, ಅತ್ಯಾಚಾರಿಗಳು ಎಲ್ಲಾ ಜಾತಿಗಳಲ್ಲೂ ಇದ್ದಾರೆ,

ಹಾಗೆಯೇ ದಕ್ಷರು, ಪ್ರಾಮಾಣಿಕರು, ಪುಣ್ಯಾತ್ಮರು, ಜ್ಞಾನಿಗಳು ಎಲ್ಲಾ ಕಡೆ ಇದ್ದಾರೆ. ಇವರಿಗೆ ಜಾತಿಯ ಹಂಗಿಲ್ಲ,

ಇನ್ನೂ ನಿದ್ರಾವಸ್ಥೆಯಲ್ಲಿರುವ ಮೂರ್ಖರೆ, ಕಿತ್ತೊಗೆಯಿರಿ ನಿಮ್ಮ ಜಾತಿಗಳ ಟೈಟಲ್ ಗಳನ್ನು,

ಮದುವೆಯಾಗಿ ನಿಮಗಿಷ್ಟದ ಹುಡುಗ/ಹುಡುಗಿಯನ್ನು ,

ಹುಟ್ಟಿಸಿ ನಿಜವಾದ ಭಾರತೀಯರನ್ನು,

ಕಟ್ಟೋಣ ಸಮಾನತೆಯ ಸಮೃದ್ಧ ಭಾರತವನ್ನು,

ಇದೇನು ದೊಡ್ಡ ಕಷ್ಟವಲ್ಲ ನಾವು ಮನಸ್ಸು ಮಾಡಿದರೆ ........

ವಿವೇಕ್ ಗೌಡ - ವಿವೇಕ್ ಆರಾಧ್ಯ,
ವಿವೇಕ್ ಶರ್ಮ - ವಿವೇಕ್ ವರ್ಮ,
ವಿವೇಕ್ ರಾವ್ - ವಿವೇಕ್ ರೈ,
ವಿವೇಕ್ ಹೆಗಡೆ - ವಿವೇಕ್ ಪಂಡಿತ್,
ವಿವೇಕ್ ಆಚಾರ್ಯ - ವಿವೇಕ್ ಸ್ವಾಮಿ,
ವಿವೇಕ್ ನಾಯಕ್ - ವಿವೇಕ್ ಬಂಜಾರ,.
ವಿವೇಕ್ ವಿಶ್ವಕರ್ಮ - ವಿವೇಕ್ ಕುಂಬಾರ,
ವಿವೇಕ್ ಭಜಂತ್ರಿ - ವಿವೇಕ್ ಹೊಲೆಯ,
ವಿವೇಕ್ ಮಾದಿಗ - ವಿವೇಕ್ ಪೂಜಾರಿ,
ವಿವೇಕ್ ಭಟ್ - ವಿವೇಕ್ ಕುರುಬ,
ವಿವೇಕ್ ಪೈ - ವಿವೇಕ್ ಠಾಕೂರ್,
ವಿವೇಕ್ ಮಡಿವಾಳ - ವಿವೇಕ್ ತಿಗಳ,
ವಿವೇಕ್ ಕಮ್ಮಾರ - ವಿವೇಕ್ ಚಮ್ಮಾರ,
ವಿವೇಕ್ ಶೆಟ್ಟಿ - ವಿವೇಕ್ ಸಿಂಗ್,
ವಿವೇಕ್ ರೆಡ್ಡಿ - ವಿವೇಕ್ ಹರಿಜನ,
ವಿವೇಕ್ ಶಾಸ್ತ್ರಿ, ವಿವೇಕ್ ಪಟೇಲ್
ಇನ್ನೂ...ಇನ್ನೂ...ಇನ್ನೂ......

ಅಯ್ಯೋ ರಾಮ, ಇದೆಲ್ಲಾ ಒಬ್ಬನೇ ಕಣ್ರೀ, ಒಂದು ಮನುಷ್ಯ ಪ್ರಾಣಿ. ಗುರುತಿಸಲಿಕ್ಕೆ ನಮ್ಮಪ್ಪ ಅಮ್ಮ ಒಂದು ಹೆಸರಿಟ್ಟರು,

ಆದರೆ ವಿವೇಕ್ ನಂತರ ಬರುತ್ತದೆ ನೋಡಿ, ಅದು ನನ್ನ ಇಡೀ ಸಾಮಾಜಿಕ ಬದುಕನ್ನು ಮತ್ತು ವ್ಯಕ್ತಿತ್ವವನ್ನು ನಿರ್ಧರಿಸುತ್ತದೆ. ನನ್ನ ಸ್ನೇಹಿತರ ಬಳಗ - ಬಂಧುಗಳ ಬಳಗ - ಆತ್ಮೀಯರ ಬಳಗ - ದೇವರು ಮತ್ತು ಧಾರ್ಮಿಕ ಬಳಗ - ರಾಜಕೀಯ ಪಕ್ಷದ ಬಳಗ - ಕೊನೆಗೆ ನನ್ನ ಚಿಂತನಾ ವಿಧಾನವನ್ನೇ ನಿರ್ಧರಿಸುತ್ತದೆ ಈ ಹೆಸರಿನ ಜೊತೆಗಿರುವ ಅಕ್ಷರಗಳು,

ಅದು ಹಾಳಾಗಿ ಹೋಗಲಿ ನನಗೆ ಮಾತ್ರ ಅನ್ವಯಿಸುತ್ತದೆ ಎಂದು ಬಿಟ್ಟು ಬಿಡೋಣವೆಂದರೆ ಇಲ್ಲ, ಈ ಅಕ್ಷರಗಳು ಇಡೀ ಸಮಾಜದ ಸ್ವಾಸ್ಥ್ಯವನ್ನೇ ನಾಶಮಾಡಿ ನಮ್ಮ ದೇಶದ ಪ್ರಗತಿಗೇ ಅಡ್ಡಿಯಾಗಿದೆ,

ಇಂದಿನ ಆಧುನಿಕ ಯುಗದಲ್ಲಿ ಯಾವುದೇ ವೈಜ್ಞಾನಿಕ ಅಥವಾ ಅರ್ಥಗರ್ಭಿತವಾದ ಯಾವ ಆಧಾರವೂ ಇಲ್ಲದ ಈ ಅಕ್ಷರಗಳು ನಮ್ಮ ಬದುಕನ್ನೇ ನಿರ್ಧರಿಸುತ್ತದೆ ಎಂದರೆ ನಾವೆಷ್ಟು ಅನಾಗರಿಕ ಸಮಾಜದಲ್ಲಿ ಬದುಕುತ್ತಿದ್ದೇವೆ ಊಹಿಸಿ,

ನಮ್ಮ ಜ್ಞಾನ - ನಮ್ಮ ನಡವಳಿಕೆ - ನಮ್ಮ ಪ್ರತಿಭೆ - ನಮ್ಮ ಪ್ರತಿಕ್ರಿಯೆಯ ಸಾಮರ್ಥ್ಯ ನಮ್ಮ ವ್ಯಕ್ತಿತ್ವ ಮತ್ತು ಜೀವನವನ್ನು ರೂಪಿಸಬೇಕಾಗಿದ್ದ ಸ್ಥಿತಿಯಲ್ಲಿಅಕ್ಷರವೋ,ನಾಮವೋ,ಕುಂಕುಮವೋ, ವಿಭೂತಿಯೋ, ಬಟ್ಟೆಯೋ, ಟೋಪಿಯೋ, ನಮ್ಮ ವ್ಯಕ್ತಿತ್ವವನ್ನು ನಿರ್ದೇಶಿಸಿದರೆ ಹೇಗೆ.?,

ಜಾತಿ ಬಿಡುವುದು ಕೆಲವರಿಗೆ ಕಷ್ಟವಾಗಬಹುದೇನೋ ?

ಆದರೆ ಮುಂದಿನ ದಿನಗಳಲ್ಲಿ ಮನುಷ್ಯತ್ವ ಇರುವ - ಬುದ್ದಿ ಇರುವ - ಜಾಗೃತರಾಗಿರುವ ಕೆಲವರಾದರೂ ಒಂದಷ್ಟು ನಾಗರಿಕವಾಗಿ ನಡೆದುಕೊಳ್ಳೋಣ ಎಂದು ಆಶಿಸುತ್ತಾ...

ಏಕೆಂದರೆ,

ಯಾರ ವಿರುದ್ಧ ಹೋರಾಟ, ಯಾರ ಪರ ಹೋರಾಟ,

ಶೋಷಿತರು ಯಾರು, ಶೋಷಕರು ಯಾರು.

ನ್ಯಾಯವಾಗಿರುವವರು ಯಾರು, ಅನ್ಯಾಯವಾಗಿರುವುದು ಯಾರಿಗೆ,

ಸಂಸದೀಯ ಪ್ರಜಾಪ್ರಭುತ್ವ, ಸಂವಿಧಾನ ಏನು ಮಾಡುತ್ತಿದೆ,

ಇಡೀ ದೇಶ ಈ ರೀತಿಯ ಅತೃಪ್ತ ಆತ್ಮವೇ ? ಅಥವಾ ಇದೇ ವಾಸ್ತವ ಇದನ್ನೇ ಒಪ್ಪಿಕೊಂಡು ಬದುಕುವುದು ಜಾಣತನವೇ ಅಥವಾ ಅನಿವಾರ್ಯವೇ,

ಭಾರತೀಯತೆ ಎಂಬುದು ಮರೀಚಿಕೆಯೇ ? ಯಾರಿಗೂ ತೃಪ್ತಿ ಇಲ್ಲ. ಒಬ್ಬರಿಗೊಬ್ಬರು ಅನುಮಾನದಿಂದ ನೋಡುವ ಈ ಖಿಂಛಿಚಿಟ ಣಡಿಣಛಿಣಣಡಿಜ ಸಂಪೂರ್ಣ ಪುನರ್ ಪರಿಶೀಲಿಸುವ ಅವಶ್ಯಕತೆ ಇದೆ.,

" ನಾನು ಈ ಮಣ್ಣಿನ, ಈ ಗಾಳಿಯ, ಈ ನೀರಿನ ವಾರಸುದಾರ. ನನ್ನ ಮೂಲ ಯಾವುದೇ ಇರಲಿ, ಈ ಕ್ಷಣದಿಂದ ನಾನೊಬ್ಬ ಭಾರತೀಯ, ನನ್ನ ನಿಷ್ಠೆ ಭಾರತೀಯತೆಗೆ. "


ಭಾರತೀಯತೆ ಎಂದರೆ,...

" ಸರ್ವತಂತ್ರ, ಸ್ವತಂತ್ರ, ಸಾರ್ವಭೌಮ, ಸಮಾನತೆಯ, ಧರ್ಮಾತೀತ, ಜಾತ್ಯಾತೀತ, ಪ್ರಜ್ಞೆ, ಉಳಿದದ್ದೆಲ್ಲಾ ನಂತರ ".

ಆ ಕನಸಿನ ದಿನಗಳ ನಿರೀಕ್ಷೆಯಲ್ಲಿ ನಿಮ್ಮೊಂದಿಗೆ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ.ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ.**
**ಹೆಚ್.ಕೆ.**
**9844013068**

### ಸಾಯಿಬಾಬಾ ಮಂದಿರದ ಲೋಕಕಲ್ಯಾರ್ಣ ಧಾರ್ಮಿಕ ಕಾರ್ಯಕ್ರಮಗಳ ಮುಕ್ತಾಯ

## ಧಾರ್ಮಿಕ ಕಾರ್ಯದಿಂದ ಮಾತ್ರ ಬದುಕಿನಲ್ಲಿ ನೆಮ್ಮದಿ: ಡಾ.ವೈ.ರಾಜರಾಂ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಬಯಲುಸೀಮೆನಾಡಿನಲ್ಲಿ ಭಗವಾನ್ ಸಾಯಿಬಾಬಾರವರ ಭಕ್ತಿಸುಧೆಯನ್ನು ಹರಿಸಿದ ಕೀರ್ತಿ ಶ್ರೀವೆಂಕಟಸಾಯಿ ಟ್ರಸ್ಟ್‌ನವರದ್ದು. ಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಮತ್ತು ತಂಡ ಭಕ್ತಾಧಿಗಳ ಸಹಕಾರದಿಂದ ಸಾಯಿಮಂದಿರವನ್ನು ನಿರ್ಮಿಸಿ ಪೂಜಾಕಾರ್ಯಗಳನ್ನು ಕೈಗೊಳ್ಳುವ ಮೂಲಕ ಈ ಭಾಗದಲ್ಲಿ ಶಾಂತಿ ನೆಲೆಸುವಂತೆ ಮಾಡಿದ್ದಾರೆ. ನಾವೆಲ್ಲರೂ ಧಾರ್ಮಿಕ ಜ್ಞಾನವನ್ನು ಹೊಂದಿದಾಗ ಮಾತ್ರ ಸಮಾಜಕ್ಕೆ ಒಳಿತನ್ನು ಮಾಡಲು ಸಾಧ್ಯವೆಂದು ನರಹರಿ ಸದ್ಗುರುಪೀಠದ



ಪೀಠಾಧ್ಯಕ್ಷ ಡಾ.ವೈ.ರಾಜರಾಂ ತಿಳಿಸಿದರು.

ಅವರು, ಗುರುವಾರ ಪಾವಗಡ ರಸ್ತೆಯ ಸಾಯಿಬಾಬಾನಗರದ ಸಾಯಿಮಂದಿರದಲ್ಲಿ ಲೋಕಕಲ್ಯಾರ್ಣವಾಗಿ ಹಮ್ಮಿಕೊಂಡಿದ್ದ ನಾಲ್ಕು ದಿನಗಳ ವಿಶೇಷ ಧಾರ್ಮಿಕ ಕಾರ್ಯಕ್ರಮ ಮುಕ್ತಾಯ ಸಮಾರಂಭದ ಸಾನಿಧ್ಯವಹಿಸಿ ಮಾತನಾಡಿದರು. ನಾಲ್ಕು ದಿನಗಳಿಂದ ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯ ಹಾಗೂ ಆಂಧ್ರ ಪ್ರದೇಶದಿಂದಲೂ ಸಹ ಸಾಯಿಭಕ್ತರು ಆಗಮಿಸಿ ತಮ್ಮ ಭಕ್ತಿ ಸಮರ್ಪಿಸಿದ್ದಾರೆ. ಲೋಕಕಲ್ಯಾರ್ಣವಾಗಿ ಟ್ರಸ್ಟ್‌ನವರು ವಿವಿಧ ಹೋಮ ಹಾಗೂ ಸುಹಾನಿಸಿ ಪೂಜೆ ನಡೆಸಿದ್ದಾರೆ. ಇದಕ್ಕೆ ಮೂಲಕಾರಣ ಈ ಭಾಗದ ಜನರಿಗೆ ಯಾವುದೇ ತೊಂದರೆಯಾಗದಂತೆ ಸಾಯಿಬಾಬಾ ಕಾಪಾಡಬೇಕೆಂಬ ಸದುದ್ದೇಶ ಅಡಗಿದೆ. ವಿಶಾಲವಾದ ಹೃದಯ ಉಳ್ಳವರು ಧಾರ್ಮಿಕ ಭಾವನೆಗಳ ಬಗ್ಗೆ ಗೌರವ ಹೊಂದಿರುವವರು ಮಾತ್ರ ಇಂತಹ ಕಾರ್ಯ ಮಾಡಲು ಸಾಧ್ಯವೆಂದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಭಗವಾನ್ ಸಾಯಿಬಾಬಾ ಮಂದಿರದ ಇತ್ತೀಚಿನ ದಿನಗಳಲ್ಲಿ ಉತ್ತಮ ಪ್ರಸಿದ್ದಿಯನ್ನು ಹೊಂದಿದೆ. ನಾಡಿನ ಸಾವಿರಾರು ಭಕ್ತರು ಆಗಮಿಸಿ ದರ್ಶನ ಪಡೆದು ಪಾವನರಾಗುತ್ತಾರೆ. ಪ್ರತಿಯೊಬ್ಬ ಭಕ್ತರ ಮನಸ್ಸಿನಲ್ಲಿ ಚಳ್ಳಕೆರೆ ಸಾಯಿಬಾಬಾಮಂದಿರ ಪುಟಪರ್ತಿ ಸಾಯಿಬಾಬಾ ಮಂದಿರದ ಎಂಬಭಾವನೆ ಮೂಡಿದೆ. ಕಳೆದ ಹಲವಾರು ವರ್ಷಗಳ ಪೂಜೆಯ ಫಲ ಈ ಭಾಗದ ಜನರ ಬದುಕನ್ನು ಹಸನುಗೊಳಿಸಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಮಾತನಾಡಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T